ಸಂಪುಟ : ೮ ಸಂಚಿಕೆ :289 ಪುಟ : 4 ಬೆಲೆ : ೩.೦೦ ಗುರುವಾರ ಡಿಸೆಂಬರ್ 28, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 8 Issue : 289 Pages : 4 Price : 3.00 Thursday December 28, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## 139ನೇ 'ಕಾಂಗ್ರೆಸ್ ಸಂಸ್ಥಾಪನಾ ದಿನಾಚರಣೆ' ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಡಿ.28ರಂದು ಬೆಳಿಗ್ಗೆ 9 ಗಂಟೆಗೆ ದಿ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯಾಲಯದಲ್ಲಿ 139ನೇ ಕಾಂಗ್ರೆಸ್ ಸಂಸ್ಥಾಪನಾ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ. ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ ಧ್ವಜಾರೋಹಣ ನೆರವೇರಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಪದಾಧಿಕಾರಿಗಳು, ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪಧಾದಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು-ಪದಾಧಿಕಾರಿಗಳು, ಜಿ.ಪಂ, ತಾ.ಪಂ, ಗ್ರಾ.ಪಂ, ಎಪಿಎಂಸಿ ಪಕ್ಷದ ಅಧ್ಯಕ್ಷರು-ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು- ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ, ಮೀನುಗಾರರ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲೀಗಲ್ ರೀಪಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಮಹಾ ಪ್ರಧಾನ ಕಾರ್ಯದರ್ಶಿ ವ್ಹಿ.ಬಿ. ಸೋಮನಕಟ್ಟಿ ಹಾಗೂ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ರಾಮ ಮಂದಿರ ಉದ್ಘಾಟನಾ ಕಾರ್ಯಕ್ರಮಕ್ಕೆ ಬಂಗಾಳ ಸಿಎಂ ಮಮತಾ ಬ್ಯಾನರ್ಜಿ ಗೈರು: ಟಿಎಂಸಿ

■ವಿಜಯಸಾಕ್ಷಿ ಸುದ್ದಿ, ಕೋಲ್ಕತಾ

ಅಯೋಧ್ಯೆಯಲ್ಲಿ ನಡೆಯಲಿರುವ ರಾಮಮಂದಿರದ ಉದ್ಘಾಟನಾ ಸಮಾರಂಭದಲ್ಲಿ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಪಾಲ್ಗೊಳ್ಳುವ ಸಾಧ್ಯತೆಯಿಲ್ಲ ಎಂದು ಹೇಳಲಾಗಿದೆ.

ಈ ಬಗ್ಗೆ ತೃಣಮೂಲ ಕಾಂಗ್ರೆಸ್ ಪಕ್ಷದ ಮೂಲಗಳು ಮಾಹಿತಿ ನೀಡಿದ್ದು, 'ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಜನವರಿಯಲ್ಲಿ ನಡೆಯಲಿರುವ ಅಯೋಧ್ಯೆಯಲ್ಲಿ ರಾಮಮಂದಿರದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವ ಸಾಧ್ಯತೆಯಿಲ್ಲ ಎಂದು ಹೇಳಿದೆ. ಟಿಎಂಸಿ ಮೂಲಗಳ ಪ್ರಕಾರ, ಜನವರಿ 22 ರಂದು ನಿಗದಿಯಾಗಿರುವ ಕಾರ್ಯಕ್ರಮದಲ್ಲಿ ಬ್ಯಾನರ್ಜಿ ಅಥವಾ ಪಶ್ಚಿಮ ಬಂಗಾಳ ಸರ್ಕಾರ ಅಥವಾ ಪಕ್ಷದ ಯಾವುದೇ ಪ್ರತಿನಿಧಿಗಳು ಹಾಜರಾಗುವುದಿಲ್ಲ ಎನ್ನಲಾಗಿದೆ. ಇದೇ ವಿಚಾರವಾಗಿ ಮಾತನಾಡಿರುವ ಟಿಎಂಸಿ ಪಕ್ಷದ ಹಿರಿಯ ನಾಯಕರೊಬ್ಬರು, "ಮುಂದಿನ ತಿಂಗಳು ಅಯೋಧ್ಯೆಯಲ್ಲಿ ನಡೆಯುವ ರಾಮಮಂದಿರ ಉದ್ಘಾಟನೆಗೆ ಮಮತಾ ಬ್ಯಾನರ್ಜಿ ಅಥವಾ ಟಿಎಂಸಿಯ ಯಾವುದೇ ಪ್ರತಿನಿಧಿ ಭಾಗವಹಿಸುವ ಪ್ರಶ್ನೆಯೇ ಇಲ್ಲ. ಧರ್ಮದೊಂದಿಗೆ ರಾಜಕೀಯ ಬೆರೆಸುವುದರಲ್ಲಿ ನಮಗೆ ನಂಬಿಕೆ ಇಲ್ಲ" ಎಂದು ತಿಳಿಸಿದ್ದಾರೆ.

### ಜಿಮ್ಸ್ ಆಸ್ಪತ್ರೆಯಲ್ಲಿ ಸಚಿವ ಎಚ್.ಕೆ. ಪಾಟೀಲರಿಂದ ಕೋವಿಡ್ ನಿರ್ವಹಣಾ ವ್ಯವಸ್ಥೆ ಪರಿಶೀಲನೆ

# ಸೋಂಕು ನಿಯಂತ್ರಣ, ನಿರ್ವಹಣೆಗೆ ಸನ್ನದ್ಧರಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ಕೋವಿಡ್-19ರ ರೂಪಾಂತರಿ, ನೂತನ ಜೆಎನ್ 1 ಪ್ರಕರಣಗಳು ರಾಜ್ಯದಲ್ಲಿ ಕಂಡುಬಂದಿವೆ. ಜಿಲ್ಲೆಯಲ್ಲಿ ಕೋವಿಡ್ ಸೋಂಕು ನಿಯಂತ್ರಣ ಹಾಗೂ ಸಮರ್ಪಕ ನಿರ್ವಹಣೆಗೆ ಸರ್ವಸನ್ನದ್ಧರಾಗುವಂತೆ ಸೂಚಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಗದಗ ಜಿಮ್ಸ್ ಆಸ್ಪತ್ರೆಯಲ್ಲಿ ಬುಧವಾರ ಕೋವಿಡ್ ನಿರ್ವಹಣೆಗಾಗಿ ಮಾಡಿಕೊಳ್ಳಲಾದ ವ್ಯವಸ್ಥೆಯನ್ನು ಪರಿಶೀಲಿಸಿ, ಉನ್ನತ ಅಧಿಕಾರಿಗಳೊಂದಿಗೆ ಸಭೆ ಜರುಗಿಸಿ, ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಚಿವರು ಮಾತನಾಡಿದರು.

ಗದಗ ಜಿಮ್ಸ್ ಆವರಣದಲ್ಲಿ 13 ಮತ್ತು 20 ಕೆಎಲ್‌ನ ಆಕ್ಸಿಜನ್ ಸಂಗ್ರಹ ಘಟಕಗಳು ನಿರ್ಮಾಣವಾಗಿವೆ ಹಾಗೂ ಆಕ್ಸಿಜನ್ ಜನರೇಶನ್ ಪ್ಲಾಂಟ್ ಕೂಡ ಕಾರ್ಯನಿರ್ವಹಿಸುತ್ತಿವೆ.



ಈ ಆಕ್ಸಿಜನ್ ಜನರೇಶನ್ ಪ್ಲಾಂಟ್‌ನಿಂದ ಸಿಲಿಂಡರ್‌ಗಳಿಗೆ ಆಕ್ಸಿಜನ್ ತುಂಬಿಸಲು ಇರುವ ಸಾಧನ-ಸಾಮಗ್ರಿಗಳನ್ನು ಶೀಘ್ರವೇ ಖರೀದಿಸಿ, ಅಳವಡಿಕೆಗೆ ತಿಳಿಸಲಾಗಿದೆ ಎಂದರು.

ಜಿಮ್ಸ್‌ನಲ್ಲಿ ಸೋಂಕಿತರ ಚಿಕಿತ್ಸೆಗಾಗಿ 50 ಬೆಡ್, ತಾಲೂಕಾ ಆಸ್ಪತ್ರೆ ಮತ್ತು ಸಿಎಚ್‌ಸಿ ಆಸ್ಪತ್ರೆಗಳಲ್ಲಿ ತಲಾ 10 ಬೆಡ್‌ಗಳನ್ನು ಮೀಸಲಿಡಲಾಗುವುದು. ಅಲ್ಲಿ ಚಿಕಿತ್ಸೆಗೆ ಅಗತ್ಯವಿರುವ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ತಿಳಿಸಲಾಗಿದೆ. ಕೋವಿಡ್ ಸಂಬಂಧಿತ ಮಾಹಿತಿಗಾಗಿ ಸಹಾಯವಾಣಿಯನ್ನೂ ಶೀಘ್ರವೇ ಆರಂಭಿಸಲಾಗುವುದು.
– ಡಾ. ಎಚ್.ಕೆ. ಪಾಟೀಲ.
ಜಿಲ್ಲಾ ಉಸ್ತುವಾರಿ ಸಚಿವರು, ಗದಗ.

ಕಳೆದ ಬಾರಿಯ ಕೋವಿಡ್ ನಿರ್ವಹಣೆಯಲ್ಲಿ ಸೋಂಕಿತರಿಗೆ ಆದ ಆಕ್ಸಿಜನ್ ಪೂರೈಕೆಯ ಸಮಸ್ಯೆಯು ಮರುಕಳಿಸಬಾರದು. ಕೋವಿಡ್ ಚಿಕಿತ್ಸೆಗೆ ಮತ್ತು ಪರೀಕ್ಷೆಗೆ ಅಗತ್ಯವಿರುವ ಸಕಲ ಸಾಮಗ್ರಿಗಳ ಸಿದ್ಧತೆಯನ್ನು ಮಾಡಿಕೊಳ್ಳುವಂತೆ ನಿರ್ದೇಶನ ನೀಡಲಾಗಿದೆ. ಸದ್ಯ ಗದಗ ಜಿಮ್ಸ್‌ನಲ್ಲಿರುವ 115 ವೆಂಟಿಲೇಟರ್‌ಗಳ ಪೈಕಿ 78 ವೆಂಟಿಲೇಟರ್‌ಗಳು ಕಾರ್ಯನಿರ್ವಹಿಸುತ್ತಿವೆ. ಉಳಿದ 37 ವೆಂಟಿಲೇಟರ್‌ಗಳ ದುರಸ್ತಿ ಕಾರ್ಯವನ್ನು ಒಂದು ವಾರದೊಳಗಾಗಿ ಕೈಗೊಳ್ಳುವಂತೆ ತಿಳಿಸಲಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಮಾಹಿತಿ ನೀಡಿದರು.

▸▸ ೩ನೇ ಪುಟಕ್ಕೆ

### ಜಿಮ್ಸ್ ಪೂರ್ವಸಿದ್ಧತಾ ಸಭೆಯಲ್ಲಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಸಚಿವ ಎಚ್.ಕೆ. ಪಾಟೀಲ

# ಸೋಂಕಿತರ ಚಿಕಿತ್ಸೆಯಲ್ಲಿ ನಿಷ್ಕಾಳಜಿ ಬೇಡ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಈಗಾಗಲೇ 416 ಕೋವಿಡ್-19 ನೂತನ ತಳಿಯ ಪ್ರಕರಣಗಳು ವರದಿಯಾಗಿದ್ದು, ಇಬ್ಬರು ಸೋಂಕಿತರು ಸಾವನ್ನಪ್ಪಿದ್ದಾರೆ. ಗದಗ ಜಿಲ್ಲೆಯಲ್ಲಿ ಕೋವಿಡ್ ಸೋಂಕು ನಿಯಂತ್ರಣ ಹಾಗೂ ಸೋಂಕಿತರ ಚಿಕಿತ್ಸೆಯಲ್ಲಿ ನಿಷ್ಕಾಳಜಿ ಬೇಡ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬುಧವಾರ ನಗರದ ಜಿಲ್ಲಾಸ್ಪತ್ರೆಯಲ್ಲಿ ಕೋವಿಡ್ ಸೋಂಕಿತರ ಚಿಕಿತ್ಸೆಗಾಗಿ ಮಾಡಿಕೊಳ್ಳಲಾದ ವ್ಯವಸ್ಥೆಯನ್ನು ಪರಿಶೀಲಿಸಿ, ನಂತರ ಜಿಮ್ಸ್‌ನಲ್ಲಿ ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಅಧಿಕಾರಿಗಳಿಗೆ ನಿರ್ದೇಶನಗಳನ್ನು ನೀಡಿದರು.

ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಮಾತನಾಡಿ, ಜಿಲ್ಲಾಸ್ಪತ್ರಯೆಲ್ಲಿ ಒಟ್ಟು 890 ಬೆಡ್‌ಗಳಿದ್ದು 735 ಆಕ್ಸಿಜನ್ ಬೆಡ್‌ಗಳನ್ನು ಹೊಂದಿದೆ. ಈ ಪೈಕಿ 50 ಬೆಡ್‌ಗಳನ್ನು ಕೋವಿಡ್ ಸೋಂಕಿತರ ಚಿಕಿತ್ಸೆಗಾಗಿ ಮೀಸಲಿರಿಸಲಾಗಿದೆ. ಜಿಮ್ಸ್ ಆವರಣದಲ್ಲಿ 20 ಹಾಗೂ 13 ಕೆಎಲ್ ಆಕ್ಸಿಜನ್ ಸಂಗ್ರಹಣಾ ಸಾಮರ್ಥ್ಯದ ಘಟಕ ಹೊಂದಿದ್ದು, 4 ಆಕ್ಸಿಜನ್ ಜನರೇಟರ್ ಪ್ಲಾಂಟ್ ಸಹ ಕಾಯ ನಿರ್ವಹಿಸುತ್ತಿವೆ. ಈಗಾಗಲೇ ಆಕ್ಸಿಜನ್ ಪೂರೈಕೆ ಕುರಿತಂತೆ ಡ್ರೈರನ್ ಮಾಡಲಾಗಿದೆ. ಇರುವ ಆಂಬ್ಯುಲೆನ್ಸ್‌ಗಳೆಲ್ಲವೂ ಸುಸ್ಥಿತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಹೆಚ್ಚುವರಿಯಾಗಿ 4 ಚಾಲಕ ಸಿಬ್ಬಂದಿಗಳ ಅಗತ್ಯವಿದೆ. ಕೋವಿಡ್ ಸೋಂಕಿತರ ಚಿಕಿತ್ಸೆಗಾಗಿ ಅಗತ್ಯವಿರುವ ಔಷಧಿ ವ್ಯವಸ್ಥೆಯನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.



ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಮಾತನಾಡಿ, ಕೋವಿಡ್ ಸೋಂಕಿತರ ಪರೀಕ್ಷೆ ನಿಯಮಿತವಾಗಿ ಜರುಗಿಸಬೇಕು. ಸೋಂಕಿತರ ಪ್ರಮಾಣ ಅಧಿಕವಾದಲ್ಲಿ ಜಿಲ್ಲಾಸ್ಪತ್ರೆಗೆ ಅಗತ್ಯದ ಭದ್ರತಾ ಸಿಬ್ಬಂದಿಗಳನ್ನು ಸಹ ನೀಡಲು ಕ್ರಮ ವಹಿಸಲಾಗುವುದು. ಒಟ್ಟಾರೆ ಕೋವಿಡ್ ನಿರ್ವಹಣೆಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಬೇಕು ಎಂದರು.

ಸರ್ಕಾರ ನೀಡಿರುವ ಮಾರ್ಗಸೂಚಿಗಳು ಜಿಲ್ಲೆಯಲ್ಲಿ ಯಥಾವತ್ತಾಗಿ ಅನುಷ್ಠಾನಗೊಳಿಸುವುದರೊಂದಿಗೆ ಸರಿಯಾಗಿ ಪಾಲನೆಯಾಗಬೇಕು. ಸೋಂಕಿತರಿಗೆ ಉತ್ತಮ ಚಿಕಿತ್ಸೆ ನೀಡುವ ಮೂಲಕ ಶೀಘ್ರ ಗುಣಮುಖರಾಗುವಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಡಾ. ಬಿ.ಸಿ. ಕರಿಗೌಡ್ರ, ಡಾ. ಸೋಮಶೇಖರ ಬಿಜ್ಜಳ, ಡಾ. ಪಲ್ಲೇದ, ಡಾ. ವೆಂಕಟೇಶ ರಾಠೋಡ, ಲೆಕ್ಕಾಧಿಕಾರಿ ಜೆ.ಸಿ. ಪ್ರಶಾಂತ ಸೇರಿದಂತೆ ಜಿಮ್ಸ್ ಆಸ್ಪತ್ರೆಯ ವೈದ್ಯಕೀಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

## 6 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ




■ವಿಜಯಸಾಕ್ಷಿ ಸುದ್ದಿ, ಗದಗ

ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಹಾಗೂ ಜೀವನೋಪಾಯ ಇಲಾಖೆ, ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ, ಬೆಂಗಳೂರು ಇವರ ಪ್ರಾಯೋಜಿಕತ್ವದಲ್ಲಿ, ಕರ್ನಾಟಕ ಉದ್ಯಮಶೀಲತಾಬಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಇವರು ಮುಂಡರಗಿ ತಾಲೂಕಿನ ಸ್ವ-ಸಹಾಯ ಸಂಘದ ಸದಸ್ಯರಿಗಾಗಿ 6 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಮಂಗಳವಾರದಂದು ಮುಂಡರಗಿ ತಾಲೂಕ ಪಂಚಾಯತ ಸಭಾಭವನದಲ್ಲಿ ಉದ್ಘಾಟಿಸಲಾಯಿತು.

ಮುಂಡರಗಿ ತಾ.,ಪಂ. ಕಾರ್ಯನಿರ್ವಹಣಾಧಿಕಾರಿ ವಿಶ್ವನಾಥ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಈ ತರಬೇತಿಯಲ್ಲಿ ಎಲ್ಲರೂ ಪಾಲ್ಗೊಂಡು ತರಬೇತಿ ಪಡೆದು ಉದ್ಯಮಶೀಲರಾಗಬೇಕು ಎಂದರು.

ಮುಂಡರಗಿ ಎಸ್.ಬಿ.ಐ. ವ್ಯವಸ್ಥಾಪಕ ಸತೀಶ ರಡ್ಡಿ ಮಾತನಾಡಿ, ಬ್ಯಾಂಕ್‌ನಿಂದ ಸಿಗುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉದ್ಯಮ ಸ್ಥಾಪಿಸಲು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ದೇವೇಂದ್ರ ಹಡಪದ, ಶ್ರೀಮತಿ ಶಾರದಾ ದೇ. ಹಡಪದ ಭಾಗವಹಿಸಿದ್ದರು. ಮೊದಲನೆ ದಿನದ ವಿಷಯಗಳನ್ನು ಸಂಪನ್ಮೂಲ ವ್ಯಕ್ತಿ ರೂಪಾ ಶೀರಿಯಪ್ಪಗೌಡ್ರ ಅವರು ಬೋಧಿಸಿದರು.

ಮಂಜುನಾಥ ಮುಳಗುಂದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಸ್ವ-ಸಹಾಯ ಸಂಘದ 30 ಸದಸ್ಯರು ತರಬೇತಿಯ ಲಾಭ ಪಡೆಯುತ್ತಿದ್ದಾರೆ.

## ನಾಳೆ ವಿಶ್ವಮಾನವ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ರಾಷ್ಟ್ರಕವಿ ಕುವೆಂಪು ಜನ್ಮದಿನದ ನಿಮಿತ್ತ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮವನ್ನು ಡಿ. 29 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂಅಹ್ಮದ್, ಸಂಸದರಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕ ಸಿ.ಸಿ.ಪಾಟೀಲ, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸುವರು.

ಹಿರಿಯ ಸಾಹಿತಿಗಳಾದ ಅಂದಾನಪ್ಪ ವಿಭೂತಿ ಅವರು ರಾಷ್ಟ್ರಕವಿ ಕುವೆಂಪುರವರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡಲಿದ್ದಾರೆ. ಪಂ.ವೆಂಕಟೇಶ ಅಲ್ಕೋಡ ಮತ್ತು ತಂಡದವರು ವಚನ ಗಾಯನ ಪ್ರಸ್ತುತ ಪಡಿಸುವರು.

ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ ಸ್ವಾಗತ ಕೋರಿದ್ದಾರೆ.

## ಯುವನಿಧಿ ಯೋಜನೆ: ನೋಂದಣಿ ಪ್ರಕ್ರಿಯೆಗೆ ಚಾಲನೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆಗೆ ಮಂಗಳವಾರ ಚಾಲನೆ ನೀಡಲಾಯಿತು. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಬೆಂಗಳೂರಿನ ವಿಧಾನಸೌಧ ಬ್ಯಾಂಕ್ವೆಟ್ ಹಾಲ್‌ನಲ್ಲಿ ಮಂಗಳವಾರದಂದು ವಿದ್ಯುಕ್ತವಾಗಿ ಚಾಲನೆ ನೀಡಿದ್ದು, ಅದರ ಪ್ರಯುಕ್ತ ಗದಗ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಯೋಜನೆಯ ಕುರಿತು ಭಿತ್ತಿಪತ್ರಗಳನ್ನು ಅನಾವರಣಗೊಳಿಸಿದರು.

ಈ ಸಂದರ್ಭದಲ್ಲಿ ಉದ್ಯೋಗಾಧಿಕಾರಿ ಬಸವಂತ ಪಿ.ಎನ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಮಲ್ಲೂರ ಬಸವರಾಜ್, ಸಹಾಯಕ ನಿರ್ದೇಶಕಿ ಉಮಾ ಪಾಳೆಗಾರ, ಜಿಮ್ಸ್ ನಿರ್ದೇಶಕ ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶಿವಪ್ರಕಾಶ ನೀಲಗುಂದ ಹಾಗೂ ಇತರರು ಹಾಜರಿದ್ದರು.

## ರಾಜ್ಯದಲ್ಲಿ ಕೊರೋನಾದಿಂದ ಒಬ್ಬರು ಸಾವು, 103 ಮಂದಿಗೆ ಪಾಸಿಟಿವ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಕೋವಿಡ್-19 ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಬುಧವಾರ ಕೊರೋನಾದಿಂದ ಒಬ್ಬರು ಮೃತಪಟ್ಟಿದ್ದಾರೆ ಮತ್ತು 103 ಮಂದಿಗೆ ಪಾಸಿಟಿವ್ ದೃಢಪಟ್ಟಿದೆ. ಇದರೊಂದಿಗೆ ರಾಜ್ಯದಲ್ಲಿ ಸಕ್ರಿಯ ಪ್ರಕರಣಗಳ ಸಂಖ್ಯೆ 479ಕ್ಕೆ ಏರಿಕೆಯಾಗಿದೆ.

ಕಳೆದ 24 ಗಂಟೆಗಳಲ್ಲಿ 103 ಹೊಸ ಕೋವಿಡ್-19 ಪಾಸಿಟಿವ್ ಪ್ರಕರಣಗಳು ವರದಿಯಾಗಿದ್ದು, ಸಕ್ರಿಯ ಪ್ರಕರಣಗಳ ಸಂಖ್ಯೆ 479ಕ್ಕೆ ಏರಿಕೆಯಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ.

ಇಂದು ರಾಜ್ಯದಲ್ಲಿ 7262 ಕೋವಿಡ್ ಪರೀಕ್ಷೆ ನಡೆಸಲಾಗಿದೆ. ಪಾಸಿಟಿವ್ ಪ್ರಮಾಣ ಶೇ. 1.41 ರಷ್ಟು ಇದೆ.

## ಸಾಕ್ಷಿ ಸುಭಾಷಿತ

ಜಟಿಲವಾದ ಸಮಸ್ಯೆ ಕುರಿತು ನೀಡುವ ತರ್ಕರಹಿತ ಒಪ್ಪಿಗೆಯೇ ನಂಬಿಕೆ

–ಎಚ್.ಎಲ್. ಮೆಂಕೆನ್

## ಸಂಪಾದಕೀಯ

### ಯತ್ನಾಳ್ ಆರೋಪಗಳನ್ನು ಗಂಭೀರವಾಗಿ ಪರಿಗಣಿಸಬೇಕಿದೆ

ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸ್ವಪಕ್ಷದ ವಿರುದ್ಧ ಮತ್ತೊಮ್ಮೆ ಗುಡುಗಿದ್ದಾರೆ. ಆದರೆ ಇದೇ ಮೊದಲ ಬಾರಿಗೆ ಬಹುದೊಡ್ಡ ಭ್ರಷ್ಟಾಚಾರದ ಕುರಿತಾಗಿ ತಮ್ಮ ಮಾತಿನ ಲಹರಿಯನ್ನು ಹರಿಬಿಟ್ಟಿದ್ದಾರೆ.

ದೇಶಾದ್ಯಂತ ಕೋವಿಡ್ ರೂಪಾಂತರ ತಳಿಯ ಸೋಂಕು ವೇಗವಾಗಿ ವ್ಯಾಪಿಸುತ್ತಿದೆ. ಕರ್ನಾಟಕದಲ್ಲೂ ಕೋವಿಡ್ ಸೋಂಕು ಏರು ಗತಿಯಲ್ಲಿ ಸಾಗಿದೆ. 500ಕ್ಕೂ ಹೆಚ್ಚು ಜನ ಸೋಂಕಿಗೆ ಒಳಗಾಗಿದ್ದಾರೆ. ಇಬ್ಬರು ಪ್ರಾಣ ಕಳೆದುಕೊಂಡಿದ್ದಾರೆ.

ಆದರೆ ಈ ಹಿಂದಿನ ಕೋವಿಡ್ ಸಂಕಷ್ಟ ಎದುರಾದ ಸಂದರ್ಭದಲ್ಲಿ ಬಿಜೆಪಿ ಸರ್ಕಾರ ಆಡಳಿತದಲ್ಲಿತ್ತು. ಆ ಅವಧಿಯಲ್ಲಿ ಕೋವಿಡ್ ಹೆಸರಿನಲ್ಲಿ 40,000 ಕೋಟಿ ರೂಪಾಯಿ ಭ್ರಷ್ಟಾಚಾರ ನಡೆದಿದೆ ಎಂದು ಯತ್ನಾಳ್ ಆರಪಿಸಿದ್ದಾರೆ.

ಯಾವಾಗ ಬಿಜೆಪಿ ರಾಜ್ಯಧ್ಯಕ್ಷರಾಗಿ ಬಿ. ವೈ. ವಿಜಯೇಂದ್ರ ಮತ್ತು ಪ್ರತಿಪಕ್ಷದ ನಾಯಕರಾಗಿ ಆರ್. ಅಶೋಕ್ ನೇಮಕವಾದರೊ, ಬಿಜೆಪಿ ವಿರುದ್ಧ ಬಸನಗೌಡ ಪಾಟೀಲ್ ಯತ್ನಾಳ ಮತ್ತಷ್ಟು ಉಗ್ರವಾಗಿ ಆರೋಪಗಳನ್ನ ಮಾಡುತ್ತಿದ್ದಾರೆ.

ಈ ಹಿಂದಿನ ಯಡಿಯೂರಪ್ಪ ಅವರ ಅಧಿಕಾರಾವಧಿಯಲ್ಲಿ ಮತ್ತು ಬಸವರಾಜ್ ಬೊಮ್ಮಾಯಿ ಆಡಳಿತ ಅವಧಿಯಲ್ಲಿಯೂ ಯತ್ನಾಳ್ ತಮ್ಮ ಪಕ್ಷದ ವಿರುದ್ಧವೇ ಆರೋಪಗಳನ್ನು ಮಾಡಿದ್ದರು. ಆದರೂ ಅವರ ವಿರುದ್ಧ ಯಾವುದೇ ಯಶಸ್ವಿ ಕ್ರಮ ಆಗಿರಲಿಲ್ಲ.

ಬಸವರಾಜ್ ಬೊಮ್ಮಾಯಿ ಅವಧಿಯ ಕೊನೆಯ ಭಾಗದಲ್ಲಿ ಹೈಕಮಾಂಡ್ ಸೂಚನೆ ಮೇರೆಗೆ ಬಸನಗೌಡ ಪಾಟೀಲ್ ಯತ್ನಾಳ ಸುಮ್ಮನಾಗಿದ್ದರು. ಈಗ ಮತ್ತೊಮ್ಮೆ ತಮ್ಮ ವಾಗ್ದಾಳಿ ಆರಂಭಿಸಿದ್ದಾರೆ.

ಬಸನಗೌಡ ಪಾಟೀಲ್ ಅವರ ರಾಜಕೀಯ ಪ್ರೇರಿತ ಹೇಳಿಕೆಗಳನ್ನು ಗಂಭೀರವಾಗಿ ಪರಿಗಣಿಸಲು ಸಾಧ್ಯವಿಲ್ಲ. ಆದರೆ ಇದೊಂದು ಬಹುದೊಡ್ಡ ಭ್ರಷ್ಟಾಚಾರದ ಆರೋಪ ಮಾಡಿರುವುದರಿಂದ ಸರ್ಕಾರ ಗಂಭೀರವಾಗಿ ಪರಿಗಣಿಸಬೇಕಾಗಿದೆ.

ಜನರ ತೆರಿಗೆ ಹಣ ಹಿಂದಿನ ಸರ್ಕಾರದಲ್ಲಿ ಪೋಲಾಗಿರುವುದನ್ನ ಅದೇ ಪಕ್ಷದ ಶಾಸಕರು ಹೇಳಿರುವಾಗ, ಆಡಳಿತದಲ್ಲಿರುವ ಪಕ್ಷ ಲಘುವಾಗಿ ಪರಿಗಣಿಸದೆ ಅದನ್ನ ಗಂಭೀರವಾಗಿ ಪರಿಗಣಿಸಬೇಕಾಗಿದೆ.

### ಕಲ್ಪನಾ ಲೋಕದಲ್ಲಿ ಮುಳುಗಿ ತೇಲಾಡುವ ಭರದಲ್ಲಿ ನಿಜ ಜೀವನವನ್ನು ಮರೆಯದಿರಿ

# ಹೊಸ ವರ್ಷ–ಯುವ ಜನತೆಯ ಚಿತ್ತ ಎತ್ತ?

ಯುವಕರ ಪಾಲಿನ ಸ್ಫೂರ್ತಿಯ ಚಿಲುಮೆ, ಭವ್ಯ ಭಾರತದ ಹೆಮ್ಮೆಯ ಪುತ್ರ ಸ್ವಾಮಿ ವಿವೇಕಾನಂದರು 'ಏಳಿ ಎದ್ದೇಳಿ, ಗುರಿ ಮುಟ್ಟುವ ತನಕ ನಿಲ್ಲದಿರಿ' ಎಂಬ ಮಾತನ್ನು ಹೇಳಿ ಅದು ಯುವಜನರ ಮನದಲ್ಲಿ ಗಟ್ಟಿಯಾಗಿ ನೆಲೆಯೂರುವಂತೆ ಮಾಡಿದ ಮಹಾನ್ ವ್ಯಕ್ತಿ. ಮನದ ಸೋಮಾರಿತನವನ್ನು ಬಡಿದೆಚ್ಚರಿಸುವ ಅವರ ನುಡಿಮುತ್ತುಗಳು ಸದಾ ಕಾಲಕ್ಕೂ ಸ್ಫೂರ್ತಿ. ಇನ್ನೊಂದೆಡೆ, 'ಯುವಕರ ಶಕ್ತಿ ಇಡೀ ಜಗತ್ತಿಗೆ ಸಾಮಾನ್ಯ ಸಂಪತ್ತು. ಯುವಕರ ಮುಖಗಳು ನಮ್ಮ ಹಿಂದಿನ, ನಮ್ಮ ವರ್ತಮಾನ ಮತ್ತು ನಮ್ಮ ಭವಿಷ್ಯದ ಯುವ ಜನರ ಶಕ್ತಿ, ಆದರ್ಶ, ಉತ್ಸಾಹ ಮತ್ತು ಧೈರ್ಯದೊಂದಿಗೆ ಸಮಾಜದ ಯಾವುದೇ ವಿಭಾಗವು ಹೊಂದಿಕೆಯಾಗುವುದಿಲ್ಲ' ಎಂದು ಕೈಲಾಸ ಸತ್ಯಾರ್ಥಿ ಹೇಳಿದ್ದಾರೆ.

ಯುವಜನತೆ ಇಂದು ಯಾವ ದಿಕ್ಕಿನತ್ತ ಹೆಜ್ಜೆ ಹಾಕುತ್ತಿದ್ದಾರೆ? ಏಕೆಂದರೆ, ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಯುವ ಜನತೆ ಮನೆಯಲ್ಲಿ ತಂದೆ–ತಾಯಿ ಮಾತು ಕೇಳದೇ ತಮಗೆ ಬೇಕಾದ ಹಾಗೆ ಮೊಬೈಲ್‌ನಲ್ಲಿ, ಇಂಟರ್ನೆಟ್‌ನಲ್ಲಿ ಕಾಲಹರಣ ಮಾಡುತ್ತಿದ್ದಾರೆ.

ಸಾಮಾಜಿಕ ಜಾಲತಾಣ ಅದರಲ್ಲಿ ಸಿಂಹಪಾಲು ಯುವಕರದ್ದೇ ಆಗಿದೆ. ಕುದಿಯುತ್ತಿರುವ ರಕ್ತ, ದಷ್ಟ–ಪುಷ್ಟ ಶರೀರ, ಶರೀರವನ್ನೇ ನಿಯಂತ್ರಿಸಲಾಗದ ಸಮಯ, ಕೆಟ್ಟ ಚಟಗಳು ಮೊಳಕೆಯೊಡೆಯುವ ಸಂಧರ್ಭ. ಇಂತಹ ಯುವತ್ವವನ್ನು ಬರೀ ಮೋಜಿಗಾಗಿ ವ್ಯಯಿಸದೆ, ಸತ್ಯ, ನೀತಿ, ನಿಯಮ, ಕ್ರಾಂತಿ ಇತ್ಯಾದಿ ಒಳ್ಳೆಯ ಕೆಲಸಗಳಲ್ಲಿ ಸೇರಿ ನಾಳೆಗೆ ಮಾದರಿಯಾಗಬೇಕು. ಆದರೆ ಪ್ರಸ್ತುತ ಯುವಕರು ಮಾಡುತ್ತಿರುವ ಕರ್ತವ್ಯಗಳೇನು? ಅವರು ಮಾಡ ಬೇಕಾದ ಕೆಲಸಗಳೇನು? ಆಧುನಿಕ ಶೈಲಿಯನ್ನು ಸಂಪೂರ್ಣವಾಗಿ ತಿರಸ್ಕರಿಸಬೇಕೆಂದಲ್ಲ. ನವನಾವಿನ್ಯತೆಯ ಆವಿಷ್ಕಾರವಾಗಿರುವ ಆಧುನಿಕತೆಯೂ ಬೇಕು. ಇತ್ತ ಸಂಪ್ರದಾಯಯುತ ಜೀವನ ಶೈಲಿಯೂ ಬೇಕು.



ಸಾಮಾಜಿಕ ಜಾಲತಾಣಗಳಾದ ಫೇಸ್ಬುಕ್, ವಾಟ್ಸಾಪ್, ಇನ್‌ಸ್ಟಾಗ್ರಾಮ್, ಎಕ್ಸ್/ಟ್ವಿಟರ್ ಸೇರಿದಂತೆ ಆನ್ಲೈನ್ ಗೇಮ್‌ಗಳ ವ್ಯಾಮೋಹದಿಂದ ಯುವಪೀಳಿಗೆ ಹಾದಿ ತಪ್ಪುತ್ತಿದೆ. ಮಾಹಿತಿಗಳನ್ನು ಹಾಗೂ ಅಭಿಪ್ರಾಯಗಳನ್ನು ಹಂಚಿಕೊಳ್ಳಲು ಒಂದು ಮಾಧ್ಯಮ ಹಾಗೂ ವೇದಿಕೆಗಳ ಅಗತ್ಯವಿದ್ದೇ ಇದೆ. ಈ ವೇದಿಕೆಗಳಲ್ಲಿ ಯೋಗ್ಯವಾದ ಮಾಹಿತಿ ಮತ್ತು ಸಾರವನ್ನು ಮಾತ್ರ ಉಳಿಸಿಕೊಂಡು ದೊಡ್ಡ ಸಂಖ್ಯೆಯಲ್ಲಿ ಹರಿದುಬರುತ್ತಿರುವ ಸುಳ್ಳು ಸುದ್ದಿಗಳನ್ನು, ಬೆದರಿಕೆಗಳನ್ನು ಮತ್ತು ನಿಂದನೆಗಳನ್ನು ಹೇಗೆ ತಡೆಗಟ್ಟಬೇಕೆಂಬುದೇ ನಮ್ಮ ಮುಂದಿರುವ ದೊಡ್ಡ ಸವಾಲಾಗಿದೆ.

ಇಂದು ಮಕ್ಕಳಿಂದ ಹಿಡಿದು ಯುವಕರು ಮತ್ತು ಹಿರಿಯರವರೆಗೂ ಮೊಬೈಲ್, ದೃಶ್ಯ ಮಾಧ್ಯಮ ಹಾಗೂ ಅಂತರ್ಜಾಲ ತಾಣ ಬಳಕೆಗೆ ಹೆಚ್ಚು ಆಕರ್ಷಿತರಾಗಿದ್ದಾರೆ. ಇದರಿಂದಾಗಿ ಯುವ ಜನತೆ ಇಂದು ದುಡಿದು ತಮ್ಮ ಮನೆಯನ್ನು ಆರ್ಥಿಕವಾಗಿ ಮುನ್ನಡೆಸುವ ಬಗ್ಗೆ ಯಾವುದೇ ಯೋಜನೆ, ಯೋಚನೆ ಇಲ್ಲದವರಂತೆ ನಡೆದುಕೊಳ್ಳುತ್ತಿದ್ದಾರೆ.

ಕೇವಲ ಕಲ್ಪನಾಲೋಕದಲ್ಲಿ ಮುಳುಗಿ ತೇಲಾಡುವ ಭರದಲ್ಲಿ ನಿಜ ಜೀವನವನ್ನು ಇಂದಿನ ಯುವ ಜನತೆ ಸಂಪೂರ್ಣವಾಗಿ ಮರೆಯುತ್ತಿದ್ದಾರೆ. ಸಂಶೋಧನೆಗಳು ಹೇಳುವ ಹಾಗೆ ಸಾಮಾಜಿಕ ಜಾಲತಾಣವನ್ನು ಸ್ವಲ್ಪವೂ ಬಿಟ್ಟಿರಲಾರದಂತಹ ಪರಿಸ್ಥಿತಿ ಮುಂದೊಂದು ದಿನ ನಿಮ್ಮ ಮಕ್ಕಳಿಗೆ ಬರಬಹುದು. ಪೋಷಕರು ಈ ಬಗ್ಗೆ ಆರಂಭದಿಂದಲೇ ಹೆಚ್ಚು ಗಮನ ಕೊಟ್ಟು, ತಮ್ಮ ಮಕ್ಕಳ ಬಗ್ಗೆ ನಿರ್ಲಕ್ಷ್ಯ ತೋರದೆ ಜಾಗ್ರತೆ ವಹಿಸಬೇಕು. ಪರಿಸ್ಥಿತಿ ಕೈಮೀರಿದರೆ ನುರಿತ ತಜ್ಞ ವೈದ್ಯರಿಂದ ಕೌನ್ಸೆಲಿಂಗ್ ಮೂಲಕ ಸಲಹೆ ಪಡೆದುಕೊಳ್ಳಲು ಅವಕಾಶವಿದೆ.

> ಯುವಕರ ಮಾನಸಿಕ ಆರೋಗ್ಯದ ಮೇಲೆ ಸಾಮಾಜಿಕ ಜಾಲತಾಣಗಳು ಪರಿಣಾಮ ಬೀರುತ್ತಿವೆ ಎಂದು ಸಂಶೋಧನೆಯ ವರದಿ ಎಚ್ಚರಿಸಿದೆ. ಉಳಿದ ವಯಸ್ಸಿನ ಗುಂಪಿನ ಜನರಿಗಿಂತ ಶೇ.90ರಷ್ಟು ಯುವಜನತೆ ಸಾಮಾಜಿಕ ಜಾಲತಾಣಗಳನ್ನು ಹೆಚ್ಚು ಬಳಕೆ ಮಾಡುತ್ತಿದ್ದಾರೆ. ಅರ್ಧ ರಾತ್ರಿಯಲ್ಲಿ ನಿದ್ರೆಯಲ್ಲಿ ಎದ್ದು ತಾವು ಹಾಕಿರುವ ಪೋಸ್ಟ್‌ಗೆ ಬಂದಿರುವ ಕಾಮೆಂಟ್ಸ್ ಮತ್ತು ಲೈಕ್ಸ್‌ಗಳನ್ನು ನೋಡಿ ಅವುಗಳಿಗೆ ಪ್ರತಿಕ್ರಿಯೆ ನೀಡುವ ಸಲುವಾಗಿ ತಮ್ಮ ಇಡೀ ರಾತ್ರಿಯ ನಿದ್ರೆಯನ್ನು ಹಾಳು ಮಾಡಿಕೊಳ್ಳಲು ಮುಂದಾಗುತ್ತಿದ್ದಾರೆ. ಇದರಿಂದ ನಿದ್ರೆಯ ಗುಣಮಟ್ಟ ಕಡಿಮೆ ಆಗುವುದರೊಂದಿಗೆ ಮಾನಸಿಕವಾಗಿ ಸಾಕಷ್ಟು ಬದಲಾವಣೆಗಳು ಉಂಟಾಗಿ, ಕೆಟ್ಟ ಆರೋಗ್ಯ ಸಮಸ್ಯೆಗಳಾದ ಮಾನಸಿಕ ಖಿನ್ನತೆ, ಬೊಜ್ಜು ಇತ್ಯಾದಿಗಳು ಎದುರಾಗುತ್ತಿವೆ.

ಮುಂದೆ ಹೊಸ ವರ್ಷ ಬರುತ್ತಿದೆ. ದಿನಗಳು ಉರುಳುತ್ತಿವೆ, ಹೊಸ ವರುಷ ಬಂದು ಹೋಗುತ್ತಲೇ ಇವೆ. ಆದರೆ ನಾವು ಇಷ್ಟು ವರ್ಷಗಳಲ್ಲಿ ಸಾಧಿಸಿದ್ದೇನೆಂದು ಒಂದು ನಿಮಿಷ ಕುಳಿತು ಆಲೋಚಿಸೋಣ. ಏಕೆಂದರೆ ಈಗಿನ ಯುವ ಜನತೆ ಹೊಸ ವರ್ಷದ ಹೆಸರಿನಲ್ಲಿ ವರ್ಷದ ಕೊನೆಯ ದಿನದಂದು ಮೋಜು–ಮಸ್ತಿಯಲ್ಲೆ ದಿನ ಕಳೆಯುತ್ತಾರೆ. ಬರೀ ಪಾರ್ಟಿ ಮಾಡುವುದರೊಂದಿಗೆ ಹೊಸ ವರ್ಷದ ಸಂಭ್ರಮಾಚರಣೆಗಳು ಒಂದು ವಾರದೊಳಗೆ ಮುಗಿದು ಹೋಗಬಹುದು. ಆದರೆ ತಮ್ಮ ಮುಂದಿನ ಜೀವನ ಇಷ್ಟಕ್ಕೆ ಸೀಮಿತವಾಗಬಾರದು. ನಮ್ಮ ಯೋಜನೆಗಳು, ಕನಸುಗಳು, ಎಷ್ಟೋ ವ್ಯಕ್ತಿಗಳು ಹಲವು ತರಹದ ಕನಸುಗಳನ್ನು ಕಂಡಿರುತ್ತಾರೆ. ಆ ಕನಸುಗಳನ್ನು ನನಸು ಮಾಡಲು, ಪ್ರಯತ್ನ ಮಾಡಬೇಕು.

ಒಟ್ಟಾರೆಯಾಗಿ ಇಂದಿನ ವಿದ್ಯಾವಂತ ಯವಜನಾಂಗ ಹೆತ್ತವರನ್ನು ಅನಾಥಾಶ್ರಮಕ್ಕೆ ಸೇರಿಸಿ ಮೌಢ್ಯಕ್ಕೆ ಬಲಿಯಾಗಿ ಮಾನವಿಯತೆ ಮರೆಯುತ್ತಿದ್ದಾರೆ. ಕೇವಲ ವಿದ್ಯಾವಂತರಾದರೆ ಸಾಲದು, ಮೊದಲು ಹೆತ್ತವರನ್ನು, ಗುರು–ಹಿರಿಯರನ್ನು ಗೌರವಿಸುವ ಸಂಸ್ಕಾರವನ್ನು ಅಳವಡಿಸಿಕೊಳ್ಳಬೇಕು. ಯುವ ಜನತೆ, ದೇಶ ಮತ್ತು ಸಮಾಜವನ್ನು ಕಟ್ಟುವ ಕಾಯಕದಲ್ಲಿ ತೊಡಗಬೇಕು. ಅಂದಾಗ ಮಾತ್ರ ಅವರು ದೇಶದ ಸಂಪತ್ತಾಗುವುದರಲ್ಲಿ ಸಂಶಯವಿಲ್ಲ.



– ಬಸವರಾಜ ಎಮ್.ಯರಗುಪ್ಪಿ.
ಬಿಆರ್‌ಪಿ, ಶಿರಹಟ್ಟಿ–ಲಕ್ಷ್ಮೇಶ್ವರ.

## ಸನ್ಮಾರ್ಗ ಮಹಾವಿದ್ಯಾಲಯದಲ್ಲಿ ಸಂವಹನ ಕಾರ್ಯಕ್ರಮ




■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಭವಿಷ್ಯನಿಧಿ (ಪಿ.ಎಫ್) ಹಾಗೂ ಕಾರ್ಮಿಕರ ರಾಜ್ಯ ವಿಮಾ ನಿಗಮ (ಇ.ಎಸ್.ಐ) ವತಿಯಿಂದ ಮಹಾವಿದ್ಯಾಲಯ ಹಾಗೂ ಲಯನ್ಸ್ ಸ್ಕೂಲ್ ಸಿಬ್ಬಂದಿಗಳಿಗೆ ಮಾಹಿತಿ, ಮಾರ್ಗದರ್ಶನ ಹಾಗೂ ಸಂವಹನ ಕಾರ್ಯಕ್ರಮ ಜರುಗಿತು.

ಹುಬ್ಬಳ್ಳಿಯ ಭವಿಷ್ಯನಿಧಿ ಕಚೇರಿಯ ಪ್ರವರ್ತನಾ ಅಧಿಕಾರಿ ಜೆ. ಜಾಫರ್ ಮಾತನಾಡಿ, ನೌಕರರ ಹಾಗೂ ಮ್ಯಾನೇಜ್‌ಮೆಂಟ್ ಪ್ರತಿ ತಿಂಗಳ ವಂತಿಗೆ ಕೂಡಿ ಮುಂದೆ ನೌಕರರಿಗೆ 58 ವರ್ಷದ ಬಳಿಕ ಅವರು ದುಡಿದ ಹಣ ಅವರಿಗೆ ಮರಳಿ ಹೇಗೆ ಸಹಾಯವಾಗುತ್ತದೆ ಎಂಬುದನ್ನು ಪಿಪಿಟಿ ಮೂಲಕ ತಿಳಿಸಿದರು. ಮನೆ ಕಟ್ಟಲು ಸೈಟ್ ಖರೀದಿಸಲು ಆಪತ್ಕಾಲದಲ್ಲಿ ಹಣ ಮುಂಗಡ, ನಿವೃತ್ತಿ ವೇತನ ಪಡೆಯಲು ಫಾರ್ಮ ನಂಬರ 10ಡಿ ಹೇಗೆ ತುಂಬಬೇಕು, ಈ ಎಲ್ಲಾ ಮಾಹಿತಿಗಳನ್ನು ವಿವರಿಸಿದರು.

ಗದುಗಿನ ಇ.ಎಸ್.ಐ ಶಾಖಾ ಪ್ರಬಂಧಕ ವಾಯ್. ಎಸ್. ಪಾಟೀಲ ಮಾತನಾಡಿ, ಇ.ಎಸ್.ಐ. ಸಂಘಟನೆಯ ಕಾರ್ಯವ್ಯಾಪ್ತಿ, ಸಹಾಯ–ಸಹಕಾರ, ಸೌಲಭ್ಯಗಳ ಬಗ್ಗೆ ವಿವರಣಾತ್ಮಕವಾಗಿ ವಿಶ್ಲೇಷಿಸಿ, ಸರ್ಕಾರದಿಂದ ಸೌಲಭ್ಯ ಪಡೆಯುವುದೊಂದೇ ನಮ್ಮ ಮುಖ್ಯ ಧ್ಯೇಯವಾಗಿರಬಾರದು. ಮೊದಲು ನಾವೆಲ್ಲರೂ ಸದೃಢ ಆರೋಗ್ಯ ಹೊಂದೋಣ, ಸಶಕ್ತ ಭಾರತವನ್ನು ನಿರ್ಮಿಸೋಣ ಎಂದು ಕರೆ ನೀಡಿದರು.

ವೇದಿಕೆಯ ಮೇಲೆ ಸನ್ಮಾರ್ಗ ಪ.ಪೂ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೇಮಾನಂದ ರೋಣದ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ಸೈಯದ್ ಮತೀನ್ ಮುಲ್ಲಾ ಹಾಗೂ ಲಯನ್ಸ್ ಸ್ಕೂಲ್ ಆಡಳಿತಾಧಿಕಾರಿ ಗಿರಿಜಾ ಬೇವಿನಕಟ್ಟಿ ಉಪಸ್ಥಿತರಿದ್ದರು.

ಉಪನ್ಯಾಸಕ ಹೇಮಂತ ದಳವಾಯಿ ಸರ್ವರನ್ನು ಸ್ವಾಗತಿಸಿ, ಮುಖ್ಯ ಅತಿಥಿಗಳನ್ನು ಸಭೆಗೆ ಪರಿಚಯಿಸಿದರೆ, ಉಪನ್ಯಾಸಕ ಪರಶುರಾಮ ಕೋಟ್ನಿಕಲ್ ವಂದಿಸಿದರು.

## ಪಂ. ಭೀಮಸೇನ ಜೋಶಿಯವರ ಭಾವಚಿತ್ರ ಅನಾವರಣ

■ವಿಜಯಸಾಕ್ಷಿ ಸುದ್ದಿ, ಗದಗ



ನನ್ನ ಹಿಂದೂಸ್ಥಾನಿ ಸಂಗೀತದ ಕಲಿಕೆಗೆ ಪ್ರೇರಣೆಯಾದವರು, ಸ್ಫೂರ್ತಿ ನೀಡಿದವರು, ಭಾರತರತ್ನ, ಗದುಗಿನ ಹೆಮ್ಮೆ ಪಂ. ಭೀಮಸೇನ ಜೋಶಿಯವರು. ಅವರು ಹಾಡಿದ ಸಂಧ್ಯಾರಾಗ ಚಲನಚಿತ್ರದ ಹಾಡನ್ನು ಕೇಳಿ ಪ್ರಭಾವಿತನಾಗಿ ಸಂಗೀತ ಕಲಿಯುವ ಸಂಕಲ್ಪ ಮಾಡಿದೆ ಎಂದು ಹಿಂದೂಸ್ತಾನಿ ಸಂಗೀತ ಕ್ಷೇತ್ರದ ಸಾಧಕ ಪಂ. ನಾಗರಾಜರಾವ ಹವಾಲದಾರ ಹೇಳಿದರು.

ಅವರು ಇತ್ತೀಚೆಗೆ ಗದುಗಿನಲ್ಲಿಯ ಪಂ. ಭೀಮಸೇನ ಜೋಶಿಯವರ ಸ್ವಗೃಹಕ್ಕೆ ಬಂದ ಸಂದರ್ಭದಲ್ಲಿ ಸ್ನೇಹಿತ ಸುಶೀಲೇಂದ್ರ ಜೋಶಿ ಅವರು ಪಂ. ಭೀಮಸೇನ ಜೋಶಿಯವರು ಆಗ ಸಂಗೀತ ಅಭ್ಯಾಸ ಮಾಡುತ್ತಿದ್ದ ಕೋಣೆಯಲ್ಲಿ, ಚಿತ್ರಕಲಾವಿದ ವಿಶ್ವನಾಥ ಗುಗ್ಗರಿ ನೀಡಿದ, ಬೆಳಗಾವಿಯ ಪ್ರಸಿದ್ಧ ಚಿತ್ರಕಲಾವಿದ ರಾಗ್ನಕರ ರಚಿಸಿದ ಭಾವಚಿತ್ರ ಅನಾವರಣಗೊಳಿಸಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಪ್ರಾಣೇಶ ಜೋಶಿ ಕುಟುಂಬದವರು, ಪಂ. ನಾಗರಾಜ ಹವಾಲದಾರ ದಂಪತಿಗಳನ್ನು, ಸುಪುತ್ರ, ತಬಲಾವಾದಕ ಕೇದಾರ ಹವಾಲದಾರ, ಸೊಸೆ ಆನಂದವರ್ಷಿಣಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಅನ್ನದಾನಿ ವಿಭೂತಿಯವರು ಪಂ. ನಾಗರಾಜರಾವ ಹವಾಲದಾರ ಕುಟುಂಬದವರನ್ನು ಸ್ವಾಗತಿಸಿ ಪರಿಚಯಿಸಿದರು.

ಕಾರ್ಯಕ್ರಮದಲ್ಲಿ ಜೋಶಿ ಸಹೋದರರಾದ ಪ್ರಕಾಶ, ಸುಶೀಲೇಂದ್ರ, ಪ್ರಾಣೇಶ, ವಾದಿರಾಜ, ವಿಶ್ವನಾಥ ಗುಗ್ಗರಿ, ನಿವೃತ್ತ ಶಿಕ್ಷಕ ಕೆ.ಆರ್. ಗುಡಿಹಾಳ ಮುಂತಾದವರು ಉಪಸ್ಥಿತರಿದ್ದರು.

## ಸಂಭ್ರಮದ ದತ್ತಾತ್ರೇಯ ತೊಟ್ಟಿಲೋತ್ಸವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಮಂಗಳವಾರ ಸಂಜೆ ದತ್ತ ಜಯಂತಿ ನಿಮಿತ್ತ ಮುತ್ತೈದೆಯರು ಶ್ರೀಗುರು ದತ್ತಾತ್ರೇಯನ ತೊಟ್ಟಿಲೋತ್ಸವ ಕಾರ್ಯಕ್ರಮವನ್ನು ಸಂಪ್ರದಾಯದಂತೆ ವಿಜೃಂಭಣೆಯಿಂದ ಆಚರಿಸಿದರು.

ಈವೇಳೆ ಸಮಾಜದ ಹಿರಿಯರಾದ ವೆಂಕಣ್ಣ ಕುಲಕರ್ಣಿ(ವೈದ್ಯ) ಮಾತನಾಡಿ, ಬ್ರಹ್ಮ ಸಮಾಜದ ವತಿಯಿಂದ ಪ್ರತಿ ವರ್ಷ ದತ್ತಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಗುತ್ತದೆ. ತ್ರಿಮೂರ್ತಿಗಳಾದ ಬ್ರಹ್ಮ, ವಿಷ್ಣು ಮತ್ತು ಮಹೇಶ್ವರರ ಅವತಾರನಾದ ದೇವರೆಂದು ದತ್ತಾತ್ರೇಯನನ್ನು ಪರಿಗಣಿಸಲಾಗುತ್ತದೆ. ತ್ರಿಮೂರ್ತಿಗಳು ತಮ್ಮನ್ನು ತಾವೇ ಋಷಿ ದಂಪತಿಗಳಾದ ಅತ್ರಿ ಮತ್ತು ಅನಸೂಯೆಯರಿಗೆ ಪುತ್ರನ ರೂಪದಲ್ಲಿ ಅರ್ಪಿಸಿದ್ದರಿಂದ ದತ್ತನೆಂದು ಕರೆಯಲಾಗುತ್ತದೆ. ದತ್ತನು ಅತ್ರಿಯ ಪುತ್ರ, ಹಾಗಾಗಿ ಆತ್ರೇಯನೆಂಬ ಹೆಸರು. ಶ್ರೀ ದತ್ತ ಮಹಾರಾಜರನ್ನು ಪೂಜಿಸಿ ಭಜಿಸುವುದರಿಂದ ಇಷ್ಟಾರ್ಥಗಳು ನೆರವೇರುತ್ತವೆ ಎಂದರು.

ಈ ಸಂದರ್ಭದಲ್ಲಿ ಎ.ಜಿ. ಕುಲಕರ್ಣಿ(ಕುರಗಡ್ಡಿ), ಎಸ್. ಎಚ್. ಕುಲಕರ್ಣಿ, ಶೇಷಗಿರಿರಾವ ಕುಲಕರ್ಣಿ, ಶಂಕರರಾವ ಕುಲಕರ್ಣಿ, ಅರುಣ ಗ್ರಾಮಪುರೋಹಿತ, ಆನಂದ ಕುಲಕರ್ಣಿ, ಆದರ್ಶ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ಅಜಿತ ಕುಲಕರ್ಣಿ, ಲಕ್ಷ್ಮೀ ಗ್ರಾಮಪುರೋಹಿತ, ಸೀಮಾ ಕೊಂಡಿ, ಜ್ಯೋತಿ ನಾಡಗೇರ, ಸಂಧ್ಯಾ ಕುಲಕರ್ಣಿ, ವನಜಾಕ್ಷಿ ಕುಲಕರ್ಣಿ, ಸನ್ಮತಿ ಸದರಜೋಷಿ, ಅನಿತಾ ಗ್ರಾಮಪುರೋಹಿತ, ಅರ್ಚನಾ ಕುಲಕರ್ಣಿ, ವಾಣಿ ಕುಲಕರ್ಣಿ, ಶ್ರೇಯಾ ಕುಲಕರ್ಣಿ, ಶೋಭಾ ಸೂರ್ಯಭಟ್, ಮುಕುಂದ ಸೂರ್ಯಭಟ್, ರಾಮಕೃಷ್ಣ ಸದರಜೋಶಿ, ಪವನ ಗ್ರಾಮಪುರೋಹಿತ ಮುಂತಾದವರಿದ್ದರು.

### ಜಿಲ್ಲಾ ಪಂಚಾಯತ್‌ಗೆ ಸಲ್ಲಿಸಲು ಜನವರಿ 9 ಕೊನೆಯ ದಿನ

## ಮತದಾನದಲ್ಲಿ ನಗರವಾಸಿಗಳ ನಿರಾಸಕ್ತಿ ಕುರಿತು ವಿಡಿಯೋ ಚಿತ್ರೀಕರಣ

■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ಬಾರಿ ಕರ್ನಾಟಕ ಸಾರ್ವತ್ರಿಕ ವಿಧಾನಸಭಾ ಚುನಾವಣೆ–2023 ರ ಚುನಾವಣೆಯಲ್ಲಿ ಶೇಕಡಾವಾರು ಮತದಾನ ಪ್ರಮಾಣವು ರಾಜ್ಯ ಮಟ್ಟಕ್ಕೆ ಹೋಲಿಕೆ ಮಾಡಿದಲ್ಲಿ ನಗರ ಪ್ರದೇಶಗಳಲ್ಲಿ ಹಾಗೂ ಮಹಾನಗರ ಪಾಲಿಕೆ ವ್ಯಾಪ್ತಿಗಳ ವಿಧಾನಸಭಾ ಕ್ಷೇತ್ರಗಳಲ್ಲಿ ಅತ್ಯಂತ ಕಡಿಮೆ ಪ್ರಮಾಣದಲ್ಲಿ ದಾಖಲಾಗಿರುವುದು ಕಂಡು ಬಂದಿದೆ.

ಈ ದಿಸೆಯಲ್ಲಿ ಭಾರತ ಚುನಾವಣಾ ಆಯೋಗವು ವಿಶೇಷವಾಗಿ ಮತದಾನ ಪ್ರಕ್ರಿಯೆಯಲ್ಲಿ ನಗರ ವಾಸಿಗಳ ನಿರಾಸಕ್ತಿಗೆ ಕಾರಣ ಹಾಗೂ ನಗರ ಪ್ರದೇಶಗಳ ಕ್ಷೇತ್ರಗಳಲ್ಲಿ ಮತದಾನದ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಕೈಗೊಳ್ಳಬಹುದಾದ ಕ್ರಮಗಳ ಕುರಿತು ಒಂದು ನಿಮಿಷದೊಳಗಿನ ಕಿರುಚಿತ್ರ ಚಿತ್ರೀಕರಿಸಲು ತೀರ್ಮಾನಿಸಲಾಗಿದೆ.

ಶಾಲಾ /ಕಾಲೇಜುಗಳಲ್ಲಿನ ಮತದಾರರ ಸಾಕ್ಷರತಾ ಸಂಘಗಳ ಮುಖೇನ, ಸಾರ್ವಜನಿಕರು ಮುಕ್ತವಾಗಿ ಜನವರಿ 10 ರೊಳಗಾಗಿ ಭಾಗವಹಿಸಿ, ವಿಡಿಯೋ ಚಿತ್ರೀಕರಣ ಸಲ್ಲಿಸುವಂತೆ ಹಾಗೂ ಪ್ರತಿ ಜಿಲ್ಲೆಯಿಂದ ಪ್ರಥಮ ಮತ್ತು ದ್ವಿತೀಯ, ತೃತೀಯ ಸ್ಥಾನ ಪಡೆದ ಕಿರುಚಿತ್ರಗಳಿಗೆ ಪ್ರಥಮ ಬಹುಮಾನ– ರೂ. 5,000/–, ದ್ವಿತೀಯ ರೂ. 3,000, ತೃತೀಯ ಬಹುಮಾನ–ರೂ.2,000 ಗಳ ಬಹುಮಾನ ಘೋಷಿಸಲಾಗಿದೆ.

ಶಾಲಾ/ಕಾಲೇಜುಗಳಲ್ಲಿನ ಮತದಾರರ ಸಾಕ್ಷರತಾ ಸಂಘಗಳ ಮುಖಾಂತರ ಕಿರುಚಿತ್ರ ಜನವರಿ 9 ರೊಳಗಾಗಿ ಗದಗ ಜಿಲ್ಲಾ ಪಂಚಾಯತ್ ಕಾರ್ಯಾಲಯಕ್ಕೆ ಸಲ್ಲಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿಗಳಾದ ವೈಶಾಲಿ ಎಂ.ಎಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆತ್ಮವಿಶ್ವಾಸ ತುಂಬುವಲ್ಲಿ ಗೈಡ್ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ




ಮಕ್ಕಳಿಗೆ ಆತ್ಮವಿಶ್ವಾಸ ತುಂಬುವ ಹಾಗೂ ಪ್ರಶ್ನೆ ಪತ್ರಿಕೆ ಎದುರಿಸುವ ನಿಟ್ಟಿನಲ್ಲಿ ಗೈಡ್ ಅತ್ಯಂತ ಸಹಾಯಕಾರಿಯಾಗಿವೆ. ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ನಾಲವಾಡ ಪ್ರತಿಷ್ಠಾನದ ಮುಖ್ಯಸ್ಥ ಡಾ.ಮಹೇಶ ನಾಲವಾಡ ಹೇಳಿದರು.

ಅವರು ಶಿರಹಟ್ಟಿಯ ಸರಕಾರಿ ಶಾಲೆಗಳಲ್ಲಿ ಪ್ರತಿಷ್ಠಾನದ ವತಿಯಿಂದ ಶಾಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಗೈಡ್‌ಗಳನ್ನು ವಿತರಿಸಿ ಮಾತನಾಡಿದರು.

ಗೈಡನಲ್ಲಿ ಹತ್ತು–ಹಲವಾರು ವಿಷಯಗಳು ಬಿಂಬಿತವಾಗಿದ್ದು, ಪರೀಕ್ಷೆಯನ್ನು ಎದುರಿಸುವ, ಶಿಕ್ಷಣದ ಮಹತ್ವ ಹಾಗೂ ಆರೋಗ್ಯದ ವಿಷಯಗಳನ್ನು ಮುಂದಿಟ್ಟುಕೊಂಡು ಉತ್ತಮವಾಗಿ ಪ್ರಕಟಗೊಂಡಿದೆ. ಅದರಲ್ಲಿರುವ ವಿಷಯಗಳನ್ನು ಮಕ್ಕಳು ಅರಿತುಕೊಳ್ಳಬೇಕು. ಒಟ್ಟು 45 ಸಾವಿರ ಗೈಡ್‌ಗಳನ್ನು ಮುದ್ರಿಸಲಾಗಿದ್ದು, ಪ್ರಮುಖವಾಗಿ ವಿಜ್ಞಾನ, ಸಮಾಜ, ಆಂಗ್ಲ ಹಾಗೂ ಗಣಿತ ವಿಷಯಗಳಿಗೆ ಹೆಚ್ಚು ಆದ್ಯತೆ ನೀಡಲಾಗಿದೆ.

ವಿಶೇಷವಾಗಿ 10ನೇ ತರಗತಿ ಮಕ್ಕಳಿಗೆ ಸಹಾಯಕವಾಗಲಿದೆ. ಓದುವ ವಿಧಾನ ಸರಳೀಕರಣಗೊಳಿಸುವಿಕೆ, ಕ್ಲಿಷ್ಟಕರ ಸಂಗತಿ ಹಾಗೂ ವಿಷಯಗಳನ್ನು ಬಿಡಿಸುವ ವಿಧಾನ, ತಾಳ್ಮೆ ಮತ್ತು ಏಕಾಗ್ರತೆ ವಿಷಯಗಳ ಬಗ್ಗೆ ನುರಿತ ಶಿಕ್ಷಣ ಪ್ರೇಮಿಗಳು ಸಿದ್ಧಪಡಿಸಿದ ಗೈಡ್‌ಗಳ ಸದುದ್ದೇಶವನ್ನು ಎಲ್ಲ ಸರ್ಕಾರಿ ಮಕ್ಕಳು ಪಡೆಯುವಂತಾಗಬೇಕು ಎಂಬುವುದು ಪ್ರತಿಷ್ಠಾನದ ಆಶಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಬೆಳ್ಳಟ್ಟಿ ಗ್ರಾ.ಪಂ ಸದಸ್ಯ ತಿಮ್ಮರಡ್ಡಿ ಮರಡ್ಡಿ, ಮಹೇಶ ಮೇಟಿ, ಎಚ್.ಎಂ. ದೇವಗಿರಿ, ಮಹೇಶ ಕಲ್ಲಪ್ಪನವರ ಮತ್ತಿತರರು ಉಪಸ್ಥಿತರಿದ್ದರು.

## ಸೋಂಕು ನಿಯಂತ್ರಣ, ನಿರ್ವಹಣೆಗೆ ಸನ್ನದ್ಧರಾಗಿ



▶▶ ಮೊದಲನೇ ಪುಟದಿಂದ

ಸೋಂಕಿತರ ಚಿಕಿತ್ಸೆಗಾಗಿ ಅಗತ್ಯವಿರುವ ಆಕ್ಸಿಜನ್ ಸಂಗ್ರಹಕ್ಕಾಗಿ ಜಿಮ್ಸ್‌ನಲ್ಲಿ 200 ಜಂಬೋ ಸಿಲಿಂಡರ್ ಇವೆ. ಜೊತೆಗೆ 10 ಹಾಗೂ 5 ಲೀಟರ್ ಸಾಮರ್ಥ್ಯದ ಆಕ್ಸಿಜನ್ ಕಾನ್ಸನ್ಟ್ರೇಟರ್‌ಗಳೂ ಸಹ ಲಭ್ಯವಿದ್ದು, ಸೋಂಕಿತರ ಚಿಕಿತ್ಸೆಗೆ ಅಗತ್ಯಕ್ಕೆ ತಕ್ಕಂತೆ ಬಳಕೆಗೆ ಸೂಚಿಸಲಾಗಿದೆ. ಜನಸಾಮಾನ್ಯರಿಗೆ ಕೋವಿಡ್ ಸೋಂಕಿನ ಚಿಕಿತ್ಸೆ ಸಮರ್ಪಕವಾಗಿ ದೊರೆಯಬೇಕು. ಯಾವುದೇ ಕಾರಣಕ್ಕೂ ತೊಂದರೆಯಾಗಬಾರದು. ಸುದ್ದಿ ಮಾಧ್ಯಮಗಳೂ ಕೋವಿಡ್ ಸಂಬಂಧಿತ ಊಹಾಪೋಹದ ಸುದ್ದಿಗಳನ್ನು ಪ್ರಸಾರ ಮಾಡಬಾರದು. ಅಧಿಕೃತ ಮಾಹಿತಿಯನ್ನಷ್ಟೇ ಪ್ರಸಾರ ಮಾಡುವಂತೆ ಕೋರಿದರು.

ಗದಗ ಜಿಲ್ಲೆಯಲ್ಲಿ ಪ್ರತಿದಿನ 100 ಕೋವಿಡ್ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. ಇದರಲ್ಲಿ 70 ಆರ್‌ಟಿಪಿಸಿಆರ್ ಹಾಗೂ 30 ರ್ಯಾಟ್ ಪರೀಕ್ಷೆ ಒಳಗೊಂಡಿರುತ್ತದೆ. ಜಿಲ್ಲೆಯಲ್ಲಿ ಸದ್ಯ 2 ಪ್ರಕರಣಗಳು ಸಸ್ಪೆಕ್ಟೆಡ್ ಎಂದು ಗುರುತಿಸಲಾಗಿದ್ದು, ಪರೀಕ್ಷಾ ವರದಿ ನಾಳೆ ಬರಲಿದೆ ಎಂದರು.

ಕೋವಿಡ್ ಪರೀಕ್ಷೆಗೆ ಅಗತ್ಯವಿರುವ ನುರಿತ ಸಿಬ್ಬಂದಿಗಳನ್ನು ಅಗತ್ಯಕ್ಕನುಸಾರ ತೆಗೆದುಕೊಳ್ಳಬೇಕು. ಚಿಕಿತ್ಸೆಗಾಗಿ ಎನ್‌ಎಚ್‌ಎಂನಿಂದ ನೇಮಕವಾದ ನರ್ಸ್‌ಗಳನ್ನು ಒಂದು ವಾರದೊಳಗಾಗಿ ಒದಗಿಸಲಾಗುವುದು. ಅಲ್ಲದೇ ಸೋಂಕಿತರ ಪ್ರಮಾಣ ಅಧಿಕವಾದಲ್ಲಿ ಜಿಲ್ಲಾಸ್ಪತ್ರೆಯ ಭದ್ರತೆಗಾಗಿ ಹೆಚ್ಚುವರಿ ಭದ್ರತಾ ಸಿಬ್ಬಂದಿಯನ್ನು ನೇಮಕಗೊಳಿಸುವ ಬಗ್ಗೆ ಚರ್ಚಿಸಲಾಗಿದ್ದು, ಅಗತ್ಯವಿದ್ದಲ್ಲಿ ಒದಗಿಸಲಾಗುವುದು ಎಂದು ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮುಖಂಡರಾದ ಬಿ.ಬಿ. ಅಸೂಟಿ, ಅಶೋಕ ಮಂದಾಲಿ ಉಪಸ್ಥಿತರಿದ್ದರು.

## ಪ್ರೌಢಶಾಲೆಯ ಎಸ್‌ಡಿಎಂಸಿ ರಚನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಅಡವಿಸೋಮಾಪೂರ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ನೂತನ ಎಸ್‌ಡಿಎಂಸಿ ಸಮಿತಿಯು ಇತ್ತೀಚೆಗೆ ರಚನೆಯಾಯಿತು. ಚುನಾವಣೆ ಮೂಲಕ ಸದಸ್ಯರು ನೇಮಕವಾಗಿದ್ದು, ಹನೀಫಸಾಬ.ಅ. ಕುಮನೂರ ಅವರನ್ನು ಅಧ್ಯಕ್ಷರನ್ನಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ.

ಕಾರ್ಯದರ್ಶಿಯಾಗಿ ಸಿ.ಎಂ. ಪತ್ತಾರ, ಸದಸ್ಯರಾಗಿ ಈರಣ್ಣ ವಾಲ್ಮೀಕಿ, ಮಂಜುನಾಥ ಸೊರಟೂರ, ನಾಗರಾಜ ನೀಲಗುಂದ, ರೇವಣ್ಣಪ್ಪ ಜಡಿ, ರೇಣುಕಾ ವಡ್ಡರ, ಸರೋಜಾ ಪುರದ, ಹನುಮವ್ವ ಸೋಮನಕಟ್ಟಿ, ನೀಲವ್ವ ಚಿಕ್ರಣ್ಣವರ ಆಯ್ಕೆಯಾಗಿದ್ದಾರೆ ಎಂದು ಶಾಲೆಯ ಮುಖ್ಯೋಪಾಧ್ಯಾಯರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

### ಗೃಹಲಕ್ಷ್ಮೀ ಯೋಜನೆಯ ವೆಬ್‌ಸೈಟ್ ಡೌನ್ | ದುರಸ್ತಿಯಾಗದ ತಾಂತ್ರಿಕ ಸಮಸ್ಯೆ

## ಇನ್ನೂ ಮುಗಿಯದ 'ಗೃಹಲಕ್ಷ್ಮೀ'ಯರ ಅಲೆದಾಟ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರ್ಕಾರದ ಮಹತ್ವಾ ಕಾಂಕ್ಷಿ ಗ್ಯಾರಂಟಿ ಯೋಜನೆಯ ಲ್ಲೊಂದಾದ ಗೃಹಲಕ್ಷ್ಮೀ ಯೋಜನೆ ಜಾರಿಗೊಂಡು 5 ತಿಂಗಳಾದರೂ ಬಹುತೇಕ ಮಹಿಳೆಯರಿಗೆ ಈ ಗ್ಯಾರಂಟಿ ಯೋಜನೆಯ ಲಾಭ ತಲುಪಿಲ್ಲ. ಅದಕ್ಕಾಗಿ ಮಹಿಳೆಯರ ನಿತ್ಯ ಬ್ಯಾಂಕ್, ಪಂಚಾಯಿತಿ, ಆಹಾರ ಇಲಾಖೆ ಸೇರಿ ಸಂಬಂಧಪಟ್ಟ ಕೇಂದ್ರಗಳಿಗೆ ಅಲೆದಾಡುವುದೂ ನಿಂತಿಲ್ಲ.

ಮನೆ ಯಜಮಾನಿಗೆ ಪ್ರತಿ ತಿಂಗಳು 2000 ರೂ. ನೀಡುವ ಗೃಹಲಕ್ಷ್ಮೀ ಯೋಜನೆಗೆ ಸಂಬಂಧಿಸಿದಂತೆ ತಾಂತ್ರಿಕ ಸಮಸ್ಯೆಗಳನ್ನು ನಿವಾರಿಸಿ ಸ್ಥಳದಲ್ಲಿಯೇ ಪರಿಹಾರ ಒದಗಿಸಲು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಕಚೇರಿಗಳಲ್ಲಿ ಡಿ. 27ರಿಂದ 29ರವರೆಗೆ ಮೂರು ದಿನಗಳ ಕಾಲ



ವಿಶೇಷ ಅಭಿಯಾನ ಆಯೋಜಿಸಿದೆ. ಅಭಿಯಾನದ ಉದ್ದೇಶವೆಂದರೆ ಆಧಾರ್ ಜೋಡಣೆ ಮಾಡುವುದು, ಗ್ರಾಹಕರ ವ್ಯಕ್ತಿಗತ ಮಾಹಿತಿ ಸಲ್ಲಿಕೆ, ಗೃಹಲಕ್ಷ್ಮೀ ಯೋಜನೆಯ ಅರ್ಜಿ ಸ್ಥಿತಿ–ಗತಿ ಪರಿಶೀಲನೆ, ಬ್ಯಾಂಕ್ ಖಾತೆಗಳಲ್ಲಿ ತಾಂತ್ರಿಕ ಸಮಸ್ಯೆಯಿದ್ದರೆ ಸರಿಪಡಿಸುವುದು ಸೇರಿ ಎಲ್ಲಾ ಸೇವೆ ಮತ್ತು ತಾಂತ್ರಿಕ ಸಮಸ್ಯೆ ನಿವಾರಣೆಗೆ ಅಭಿಯಾನ ಕೈಗೊಳ್ಳಲಾಗಿದೆ.

ಈ ಹಿನ್ನೆಲೆಯಲ್ಲಿ ಬುಧವಾರ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ಪುರಸಭೆ, ಗ್ರಾಮ್ ಒನ್, ಕರ್ನಾಟಕ ಒನ್, ಬಾಪೂಜಿ ಸೇವಾ ಕೇಂದ್ರಗಳಿಗೆ ಗೃಹಲಕ್ಷ್ಮೀ ಆಕಾಂಕ್ಷಿ ಫಲಾನುಭವಿಗಳು ನೂರಾರು ಸಂಖ್ಯೆಯಲ್ಲಿ ಜಮಾವಣೆಗೊಂಡಿದ್ದರು. ಆದರೆ ಗೃಹಲಕ್ಷ್ಮೀ ಯೋಜನೆಯ ವೆಬ್‌ಸೈಟ್ ತೆರೆದುಕೊಳ್ಳದೇ ಇರುವುದರಿಂದ ಸೇರಿದ್ದ ಮಹಿಳೆಯರು ಸಂಜೆಯವರೆಗೂ ಕಾಯ್ದು, ಹಿಡಿಶಾಪ ಹಾಕಿ ಬಂದ ದಾರಿಗೆ ಸುಂಕವಿಲ್ಲವೆಂದು ವಾಪಸ್ ಹೋದರು.

ಈ ವೇಳೆ ತಾಲೂಕಿನ ಯಳವತ್ತಿ ಗ್ರಾಮದ ಸರೋಜಾ ಅಜ್ಜನಗೌಡ್ರ, ಲಲಿತಾ ಚಿಣಗಿ, ಚನ್ನವ್ವ ಕೊಲ್ಹಾರಿ, ಕಸ್ತೂರೆವ್ವ ಅರ್ಕಸಾಲಿ ಕಳೆದ ನಾಲ್ಕೈದು ತಿಂಗಳಿಂದ ಗೃಹಲಕ್ಷ್ಮೀ ಯೋಜನೆಗಾಗಿ ಅಲೆದಾಡುತ್ತಿದ್ದೇವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

### ಸಮಸ್ಯೆಗಳೇನು?

ಫಲಾನುಭವಿ ಆಗಲು ಮನೆಯ ಯಜಮಾನಿ ಎಂದು ಪಡಿತರ ಕಾರ್ಡ್‌ನಲ್ಲಿ ನಮೂದಾಗಿರಬೇಕು. ಯಜಮಾನನ ಹೆಸರಿದ್ದರೆ ತಿದ್ದುಪಡಿ ಮಾಡಿಸಬೇಕು. ಆದರೆ ಸದ್ಯ ಪಡಿತರ ತಿದ್ದುಪಡಿ/ಸೇರ್ಪಡೆಯೂ ಸಾಧ್ಯವಾಗುತ್ತಿಲ್ಲ. ಸಾಕಷ್ಟು ಫಲಾನುಭವಿಗಳ ಪಡಿತರ ಚೀಟಿರದ್ದಾಗಿದ್ದು, ಚಾಲ್ತಿಯಲ್ಲಿಲ್ಲದಿರುವುದೂ ಸಮಸ್ಯೆಯಾಗಿದೆ. ಇದೀಗ ಗೃಹಲಕ್ಷ್ಮೀ ಯೋಜನೆಗಾಗಿ ಅದನ್ನು ಸಕ್ರಿಯಗೊಳಿಸಲು ಸಾಕಷ್ಟು ಮಂದಿ ಪರದಾಡುತ್ತಿದ್ದಾರೆ. ಇಂತವರಿಗೆ ಗೃಹಲಕ್ಷ್ಮೀ ಸೌಲಭ್ಯ ದೊರೆಯುತ್ತಿಲ್ಲ. ಇನ್ನು ಗೃಹಲಕ್ಷ್ಮೀ ಯೋಜನೆಗೆ ಅರ್ಜಿ ಹಾಕಿ, ಅದು ಸ್ವೀಕೃತಗೊಂಡಿದ್ದರೂ ಬ್ಯಾಂಕ್ ಖಾತೆ, ಆಧಾರ್ ಜೋಡಣೆ ಕಾರಣದಿಂದ ಕೆಲವರ ಖಾತೆಗೆ ಹಣ ಬರುತ್ತಿಲ್ಲ. ಇಂಥ ಸಮಸ್ಯೆಗಳನ್ನು ಸಾಕಷ್ಟು ಮಂದಿ ಎದುರಿಸುತ್ತಿದ್ದು, ನಿತ್ಯ ಸಂಬಂಧಿಸಿದ ಸರಕಾರಿ ಕಚೇರಿಗಳಿಗೆ ಅಲೆದಾಡುತ್ತಿದ್ದಾರೆ.

### 'ಪುಲಿಗೆರೆ ಪೌರ್ಣಿಮೆ' ಕಾರ್ಯಕ್ರಮ ಸರಣಿಯ 25ನೇ ಸಂಚಿಕೆಯಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ

## ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಪ್ರತೀಕ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಹಮ್ಮಿಕೊಳ್ಳುವ 'ಪುಲಿಗೆರೆ ಪೌರ್ಣಿಮೆ' ಕಾರ್ಯಕ್ರಮ ಸರಣಿಯ 25ನೇ ಸಂಚಿಕೆಯು ಮಂಗಳವಾರ ದೇವಸ್ಥಾನದ ಆವರಣದಲ್ಲಿ ಯಶಸ್ವಿಯಾಗಿ ಜರುಗಿತು.

ತಹಸೀಲ್ದಾರ ವಾಸುದೇವ ಸ್ವಾಮಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿವೆ. ಈ ಭಾಗದಲ್ಲಿಯೇ ಐತಿಹಾಸಿಕ ಪರಂಪರೆಯನ್ನು ಸಾರುವ ಸೋಮೇಶ್ವರ ದೇವಾಲಯವನ್ನು ವೀಕ್ಷಿಸುವುದೇ ಒಂದು ಸೌಭಾಗ್ಯ. ಸುಧಾ ಮೂರ್ತಿಯವರ ಕಳಕಳಿಯಿಂದ ದೇವಸ್ಥಾನ ಜೀರ್ಣೋದ್ಧಾರಗೊಂಡ ಮೇಲೆ ಪ್ರವಾಸಿಗರು ಹೆಚ್ಚುತ್ತಿದ್ದಾರೆ. ದೇವಸ್ಥಾನದಲ್ಲಿ ಸದಾ ಸಾಂಸ್ಕೃತಿಕ, ಧಾರ್ಮಿಕ ಚಟುವಟಿಕೆಗಳು



ನಡೆಯುವಂತೆ ನೋಡಿಕೊಳ್ಳುವ ಸಮಿತಿಯ ಕಾರ್ಯ ಸ್ತುತ್ಯಾರ್ಹವಾಗಿದೆ ಎಂದರು.

ತಾ.ಪಂ ಇಒ ಕೃಷ್ಣಪ್ಪ ಧರ್ಮರ ಮಾತನಾಡಿ, ಪಾರ್ವತಿ ಸಮೇತ ಪರಶಿವನ ಮೂರ್ತಿ ಇಲ್ಲಿರುವುದು ಜಗತ್ತಿನಲ್ಲಿಯೇ ವಿಶೇಷ. ಶಿವನು ಪಾರ್ವತಿಯೊಂದಿಗೆ ತನ್ನ ವಾಹನವಾಗಿರುವ ನದಿಯನ್ನೇರಿ ಹೊರಟಿರುವ ಮೂರ್ತಿ ನಯನ ಮನೋಹರವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಸೋಮೇಶ್ವರ ಟ್ರಸ್ಟ್ ಕಮಿಟಿಯು ಕೇವಲ ಧಾರ್ಮಿಕ ಕಾರ್ಯಕ್ರಮಕ್ಕೆ ಮಾತ್ರ ಸೀಮಿತವಾಗದೆ, ಸಾಮಾಜಿಕ, ಶೈಕ್ಷಣಿಕ ಕಳಕಳಿಯ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದೆ. ಇದಕ್ಕೆ ಎಲ್ಲರೂ ಸಹಕಾರ ನೀಡುತ್ತಿರುವದು ಹೆಮ್ಮೆಯ ಸಂಗತಿ ಎಂದರು.

ಸೋಮಣ್ಣ ಬಂಡಿವಾಡ, ಎಂ.ಸಿದ್ದಲಿಂಗಯ್ಯ, ಡಾ. ಎಂ.ಆರ್. ಕಲಿವಾಳಮಠ, ಎನ್.ಆರ್. ಸಾತಪುತೆ ಮುಖ್ಯ ಅತಿಥಿಗಳಾಗಿದ್ದರು. ಪುಲಿಗೆರೆ ಪೌರ್ಣಿಮೆ ರಜತ ಸಂಚಿಕೆಯ ಪ್ರಯುಕ್ತ ಲಕ್ಷ್ಮೇಶ್ವರದ ಗುರು ಗಂಧರ್ವ ಸಂಗೀತ ಸಭಾ ವತಿಯಿಂದ ವಿದ್ಯಾರ್ಥಿಗಳು ಹಾಗೂ ಸಂಗೀತ ಶಿಕ್ಷಕ ಪರಶುರಾಮ ಭಜಂತ್ರಿಯವರಿಂದ ಸಂಗೀತ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದಲ್ಲಿ ಪುರಸಭಾ ಸದಸ್ಯ ಮಹೇಶ್ ಹೊಗೆಸೊಪ್ಪಿನ, ಪೂರ್ಣಾಜಿ ಕರಾಟೆ, ನೀಲಪ್ಪ ಕರ್ಜಕಣ್ಣವರ, ಮಾಲಾದೇವಿ ದಂದರಗಿ, ಸುಮಾ ಚೋಟಗಲ್, ಬಸವರಾಜ ಪುಟಾಣಿ, ವಿರುಪಾಕ್ಷಪ್ಪ ಆದಿ, ಸುರೇಶ ರಾಚನಾಯ್ಕರ, ಮಲ್ಲೇಶಪ್ಪ ಕಣವಿ, ಗೋಪಾಲ ನಾಯಕ, ಡಿ.ಎಚ್. ಪಾಟೀಲ, ಎಸ್.ವಿ. ಕನೋಜ, ಅಶೋಕ ನೀರಾಲೋಟಿ, ಎಂ.ಎಸ್. ಹಿರೇಮಠ, ಸೋಮಶೇಖರ ಕೆರಿಮನಿ, ನಾಗರಾಜ ಕಳಸಾಪುರ, ಸತೀಶ ಬೋಮಲೆ, ಎಲ್.ಆರ್. ಮಲ್ಲಸಮುದ್ರ ಮುಂತಾದವರು ಉಪಸ್ಥಿತರಿದ್ದರು. ಜಿ.ಎಸ್. ಗುಡಗೇರಿ, ಚಂದ್ರು ನೇಕಾರ ನಿರ್ವಹಿಸಿದರು.

## ದ.ಸಾ.ಪ ಜಿಲ್ಲಾಧ್ಯಕ್ಷರಾಗಿ ಎಂ.ಡಿ. ಮಾದರ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ದಲಿತ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಎಂ.ಡಿ. ಮಾದರ ಆಯ್ಕೆಯಾಗಿದ್ದಾರೆ. ಇವರ ಸಾಹಿತ್ಯ ಚಟುವಟಿಕೆ ಮತ್ತು ಕ್ರಿಯಾಶೀಲತೆಯನ್ನು ಗುರುತಿಸಿ ದಲಿತ ಸಾಹಿತ್ಯ ಪರಿಷತ್ತಿನ ರಾಜ್ಯ ಘಟಕದ ಅಧ್ಯಕ್ಷ ಡಾ. ಅರ್ಜುನ ಗೊಳಸಂಗಿ, ಕಾರ್ಯದರ್ಶಿ ಸುಭಾಸ ಹೊದ್ಲೂರ, ವಿಭಾಗೀಯ ಸಂಯೋಜಕರಾದ ಡಾ. ಸುಜಾತಾ ಚಲವಾದಿ ಅವರ ಸೂಚನೆ ಹಾಗೂ ಗದುಗಿನ ಸಾಹಿತಿಗಳಾದ ಈರಪ್ಪ ಮಾದರ ಅವರ ಸಲಹೆಯಂತೆ ಎಂ.ಡಿ. ಮಾದರ ಅವರನ್ನು ಗದಗ ಜಿಲ್ಲಾ ದಲಿತ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.

## ಕಲ್ಲಡ್ಕ ಪ್ರಭಾಕರ್ ಭಟ್ ಹೇಳಿಕೆ ಖಂಡನೀಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಶ್ರೀರಂಗಪಟ್ಟಣದ ಹನುಮಯಾತ್ರೆಯ ಸಂದರ್ಭದಲ್ಲಿ ಮಂಡ್ಯದ ಬಹಿರಂಗ ಸಭೆಯನ್ನುದ್ದೇಶಿಸಿ ಕಲ್ಲಡ್ಕ ಪ್ರಭಾಕರ ಭಟ್ ಮುಸ್ಲಿಂ ಮಹಿಳೆಯರಿಗೆ ಅಸಾಂವಿಧಾನಿಕ ಹಾಗೂ ಅಸಹ್ಯವಾದ ಮಾತುಗಳನ್ನಾಡಿರುವುದನ್ನು ವೆಲ್ಫೇರ್ ಪಾರ್ಟಿ ಮಹಿಳಾ ವಿಭಾಗ ಕರ್ನಾಟಕ ತೀವ್ರವಾಗಿ ಖಂಡಿಸುತ್ತದೆ ಮಹಿಳಾ ವಿಭಾಗದ ರಾಜ್ಯಾಧ್ಯಕ್ಷೆ ಸಬೀಹಾ ಪಟೇಲ್ ಹೇಳಿದ್ದಾರೆ.

ಇಂತಹ ತುಚ್ಛ ಹೇಳಿಕೆ ಕೊಟ್ಟ ಕಲ್ಲಡ್ಕ ಪ್ರಭಾಕರ್ ಭಟ್ ಕೇವಲ ಮುಸ್ಲಿಂ ಸಮುದಾಯದ ಮಹಿಳೆಯರಿಗೆ ಮಾತ್ರ ಹೇಳಿದ ಮಾತುಗಳಲ್ಲ, ಬದಲಾಗಿ ಇದು ಇಡೀ ಮಹಿಳಾ ಸಮಾಜಕ್ಕೆ ಅವಮಾನ ಮಾಡಿದ ಹೇಳಿಕೆಯಾಗಿದೆ. ಮುಸ್ಲಿಂ ಸಮುದಾಯದ ಮಹಿಳೆಯರಿಗೆ ಯಾರೂ ದಾರಿ ತೋರಿಸುವ ಅವಶ್ಯಕತೆ ಇಲ್ಲ. ಇಸ್ಲಾಂ ಧರ್ಮ ಮಹಿಳೆಯ ಸ್ಥಾನಮಾನ ಹಾಗೂ ಅವಳ ಹಕ್ಕುಗಳನ್ನು ಎತ್ತಿ ಹಿಡಿದಿದೆ. ತ್ರಿವಳಿ ತಲಾಖನ್ನು ಮುಂದಿಟ್ಟುಕೊಂಡು ಯಾವುದೇ ಅಧ್ಯಯನ ಇಲ್ಲದೆ ಇಂತಹ ಹೇಳಿಕೆಗಳನ್ನು ಕೊಡುವುದು ಅಸಾಂವಿಧಾನಿಕ. ಇಂತಹ ಪ್ರಚೋದನಾಕಾರಿ ಹೇಳಿಕೆಗಳು ನಿಲ್ಲದಿದ್ದರೆ, ಸರಕಾರ ಇಂತಹ ಮುಖಂಡರುಗಳ ವಿರುದ್ಧ ತಕ್ಷಣ ಕಠಿಣ ಕ್ರಮ ತೆಗೆದುಕೊಳ್ಳದೇ ಇದ್ದರೆ ಉಗ್ರ ಹೋರಾಟವನ್ನು ಮಾಡುತ್ತೇವೆ. ಕಲ್ಲಡ್ಕ ಪ್ರಭಾಕರ್ ಭಟ್ ತಮ್ಮ ಈ ಅಶ್ಲೀಲವಾದ ಹೇಳಿಕೆಯನ್ನು ವಾಪಸ್ ತೆಗೆದುಕೊಳ್ಳಬೇಕು ಹಾಗೂ ಮಹಿಳೆಯರಲ್ಲಿ ಕ್ಷಮೆ ಯಾಚಿಸಬೇಕು. ಗೃಹ ಸಚಿವರು ತಕ್ಷಣ ಮಧ್ಯ ಪ್ರವೇಶಿಸಿ ರಾಜ್ಯದಲ್ಲಿ ಶಾಂತಿಯನ್ನು ಕಾಪಾಡಬೇಕೆಂದು ಅವರು ಆಗ್ರಹಿಸಿದ್ದಾರೆ.

## ಗುಣಮಟ್ಟದ ಉಚಿತ ವಸತಿ ನೀತಿ ಜಾರಿಯಾಗಲಿ




■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಬಹುಸಂಖ್ಯಾತರಿಗೆ ಅಕ್ಷರದ ಅರಿವು ಮೂಡಿಸಿದ ಜ್ಯೋತಿಬಾಯಿ ಫುಲೆ ಮತ್ತು ಮಾತೆ ಸಾವಿತ್ರಿಬಾಯಿ ಫುಲೆಯವರ ನೆನಪಿನಲ್ಲಿ ರಾಷ್ಟ್ರೀಯ ಶಿಕ್ಷಣ ದಿನ ಆಚರಿಸಬೇಕು. ಇಂದಿನ ಸರ್ಕಾರಗಳ ಹೊಸ ಆರ್ಥಿಕ ನೀತಿಗಳಿಂದ ವಂಚನೆಗೊಳಗಾಗುತ್ತಿರುವ ಸಣ್ಣ, ಮತ್ತು ಅತೀ ಸಣ್ಣ ರೈತರಿಂದ ಭೂಸ್ವಾದೀನ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು. ಭೂಹೀನ ಕೃಷಿ ಕಾರ್ಮಿಕರಿಗೆ ಭೂಮಿ ಮಂಜೂರು ಮಾಡಬೇಕು. ಅಲ್ಲದೇ ವಸತಿ ರಹಿತರಿಗೆ ಘನತೆಯಿಂದ ಜೀವಿಸಲು ಅನುವು ಮಾಡಿಕೊಡುವುದಕ್ಕಾಗಿ ಉತ್ತಮ ಗುಣಮಟ್ಟದ ಉಚಿತ ವಸತಿ ನೀತಿ ಜಾರಿಗೆ ತರಬೇಕು ಎಂದು ದಲಿತ ಮುಖಂಡ ಮೋಹನ ಆಲಮೇಲಕರ ಹೇಳಿದರು.

ಅವರು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರವಾದ) ಜಿಲ್ಲಾ ಸಮಿತಿಯ ವತಿಯಿಂದ ಸಂವಿಧಾನ ಸಮರ್ಪಣ ದಿನದ ಅಂಗವಾಗಿ ಸಂವಿಧಾನ ರಕ್ಷಣೆಗಾಗಿ ಜ. ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ನಡೆದ ಗದಗ ಜಿಲ್ಲಾ ಮಟ್ಟದ ಜಾಗೃತ ಸಮಾವೇಶದಲ್ಲಿ ಮಾತನಾಡಿದರು.

ಸರ್ಕಾರ ಸಾಮಾನ್ಯ ಜನರ ಮೇಲೆ ವಿಧಿಸುತ್ತಿರುವ ತೆರಿಗೆಯನ್ನು ಕಡಿಮೆಗೊಳಿಸಬೇಕು. ಅಂದಾಗ ಮಾತ್ರ ದಲಿತರ ಏಳ್ಗೆ ಸಾಧ್ಯ. ಡಾ. ಅಂಬೇಡ್ಕರವರು ದಲಿತರಿಗೆ ಮಾತ್ರ ಸಂವಿಧಾನ ರಚನೆ ಮಾಡಿಲ್ಲ. ದೇಶದ ಎಲ್ಲ ಸಮುದಾಯಗಳಿಗೂ ಸಮಪಾಲು–ಸಮಬಾಳು ಎಂಬ ತತ್ವದಡಿಯಲ್ಲಿ ಸಂವಿಧಾನ ರಚನೆ ಮಾಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಡಿಎಸ್‌ಎಸ್ (ಅಂಬೇಡ್ಕರವಾದ) ಜಿಲ್ಲಾ ಪ್ರಧಾನ ಸಂಚಾಲಕ ಬಾಲರಾಜ ಅರಬರ, ನಾಗಣ್ಣ ಬಡಿಗೇರ, ಎಸ್.ಎನ್. ಬಳ್ಳಾರಿ, ಹನಮಂತಪ್ಪ ವೀರಾಪೂರ, ಸುರೇಶ ಕಟ್ಟಿಮನಿ, ಬಸವರಾಜ್ ಕಡೇಮನಿ, ವೆಂಕಟೇಶಯ್ಯ, ವಸಂತ ಸಿದ್ದಮ್ಮನಹಳ್ಳಿ, ಆನಂದ ಸಿಂಗಾಡಿ, ಮುತ್ತಣ್ಣ ಚವಡಣ್ಣವರ, ರಮೇಶ ಬಾಳನ್ನವರ ಸೇರಿದಂತೆ ದಲಿತ ಮುಖಂಡರು ಉಪಸ್ಥಿತರಿದ್ದರು.

## ಹಿಜಾಬ್ ವಿಚಾರವನ್ನು ರಾಜಕೀಯಗೊಳಿಸದಿರಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು




ಹಿಜಾಬ್ ವಿಚಾರದಲ್ಲಿ ರಾಜಕೀಯ ಮಾಡಬೇಡಿ. ಅದು ಒಂದು ಧಾರ್ಮಿಕ ಸ್ವಾತಂತ್ರ್ಯದ ಭಾಗವಾಗಿದೆ. ರಾಜಕೀಯ ಲಾಭದ ಉದ್ದೇಶಕ್ಕಾಗಿ ಯಾವುದೇ ರಾಜಕೀಯ ಪಕ್ಷ ಹಿಜಾಬ್ ಪ್ರಕರಣವನ್ನು ಬಳಸಬಾರದು ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಕರ್ನಾಟಕ ರಾಜ್ಯಾಧ್ಯಕ್ಷ ಅಡ್ವೊಕೇಟ್ ತಾಹೇರ್ ಹುಸೇನ್ ವಿನಂತಿಸಿದ್ದಾರೆ.

ಒಂದು ಧರ್ಮದ ವಿದ್ಯಾರ್ಥಿನಿಯರು ಶಿರೋವಸ್ತ್ರ ಧರಿಸುವುದರಿಂದ ಸಮಾಜಕ್ಕೆ ಯಾವುದೇ ದುಷ್ಪರಿಣಾಮವಾಗದು. ಸಮಾಜದಲ್ಲಿ ಅನೈತಿಕತೆಗೆ ಅದು ಆಸ್ಪದ ನೀಡದು. ರಾಜಕೀಯ ಲಾಭ ಗಳಿಸಲು ನಿರ್ದಿಷ್ಟ ಧರ್ಮವೊಂದರ ಮೇಲೆ ಹಿಜಾಬ್ ವಿಚಾರ ಪ್ರಸ್ತಾಪಿಸಿ ಬಿಜೆಪಿ ದ್ವೇಷ ಸಾಧಿಸಲು ಹೊರಟಿದೆ. ಇದು ಒಂದು ಧರ್ಮದ ಮೂಲಭೂತ ಹಕ್ಕುಗಳ ಮೇಲೆ ಮಾಡುತ್ತಿರುವ ದಬ್ಬಾಳಿಕೆಯಾಗಿದೆ. ಅಧಿಕಾರಾರೂಢ ಕಾಂಗ್ರೆಸ್ ಕೂಡಾ ಈ ವಿಚಾರದಲ್ಲಿ ಮುಸ್ಲಿಂ ಸಮುದಾಯದ ಮತ ಬಯಸಿ ರಾಜಕೀಯ ಮಾಡಬಾರದು.

## ಮಂತ್ರಾಲಯದಲ್ಲಿ ಕನ್ನಡ ಹಬ್ಬ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕನ್ನಡ ಭಾಷೆಯ ಪರಂಪರೆ ಬಗ್ಗೆ ಎಷ್ಟು ಬರೆದರೂ, ಮಾತನಾಡಿದರೂ ಕಡಿಮೆಯೇ. ಅದರ ಶ್ರೀಮಂತಿಕೆ ಅಗಾಧವಾಗಿದೆ. ಕನ್ನಡ ನಾಡಿನ ಸಾಂಸ್ಕೃತಿಕ ಪರಂಪರೆ ಜಗತ್ತಿನೆಲ್ಲೆಡೆ ಪಸರಿಸಲಿ ಎಂದು ಮೈಸೂರಿನ ಶಿಕ್ಷಕಿ, ಕವಯಿತ್ರಿ ದೀಪಶ್ರೀ ಅಭಿಪ್ರಾಯಪಟ್ಟರು.

ಅವರು ಇತ್ತೀಚೆಗೆ ಶ್ರೀ–ಕ್ಷೇತ್ರ ಮಂತ್ರಾಲಯದಲ್ಲಿ ಕನ್ನಡ ಸಾಹಿತ್ಯ ಸಂಸ್ಕೃತಿ ಅಭಿವೃದ್ಧಿ ಟ್ರಸ್ಟ್ ಕುಕನೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸುವರ್ಣ ಕರ್ನಾಟಕ ಸಂಭ್ರಮಾಚರಣೆ, ರಾಷ್ಟ್ರೀಯ ಕನ್ನಡ ಹಬ್ಬ, ನಾಡು–ನುಡಿ ಕುರಿತು ವಿಚಾರ ಸಂಕಿರಣ ಹಾಗೂ ಭಕ್ತಿ ಕವಿಗೋಷ್ಠಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು



ಮಾತನಾಡಿದರು.

ಧಾರವಾಡದ ಪತ್ರಕರ್ತ ಎಚ್.ಆರ್. ವಸ್ತ್ರದ ಮಾತನಾಡಿ, ಕನ್ನಡ ಸಾಹಿತ್ಯ ಸಂಸ್ಕೃತಿ ಅಭಿವೃದ್ಧಿ ಟ್ರಸ್ಟ್ ನಾಡು–ನುಡಿ, ಪರಂಪರೆ ಉಳಿಸುವ ನಿಟ್ಟಿನಲ್ಲಿ ಸೇವೆಗೆ ಮುಂದಾಗಿರುವುದು ಉತ್ತಮ ಬೆಳವಣಿಗೆ. ಆಂಧ್ರ, ತಮಿಳು ಸೇರಿ ಹಲವಾರು ಭಾಷಿಕರು ಸೇರುವ ಧಾರ್ಮಿಕ ಕೇಂದ್ರ ಮಂತ್ರಾಲಯದಲ್ಲಿ ಸಾಂಸ್ಕೃತಿಕ ಸಂಭ್ರಮ ಹಮ್ಮಿಕೊಂಡಿದ್ದು ಸಂತಸದ ಬೆಳವಣಿಗೆಯಾಗಿದೆ. ಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಪ್ರೋತ್ಸಾಹ ಈ ಸಂಸ್ಥೆಗೆ ದೊರೆ–ಯಲಿ ಎಂದರು.

'ಕವಿಗಳು ಕಂಡಂತೆ ಶ್ರೀ ರಾಘವೇಂದ್ರ ರಾಯರು' ಕವಿಗೋಷ್ಠಿಯಲ್ಲಿ ಮೈಸೂರಿನ ಸಾಹಿತಿ ಭಾಗ್ಯಲಕ್ಷ್ಮೀ ನಾರಾಯಣ, ದೀಪಶ್ರೀ ಎನ್, ಮಾಲಾ ಕೆ, ರಾಯಚೂರಿನ ಎಚ್. ಅಡವಿರಾವ್, ಕೊಪ್ಪಳದ ಬಸವರಾಜ್ ಚೌಡಕಿ ಮೊದಲಾದವರು ಕವಿತೆ ವಾಚಿಸಿದರು. ಭಾಗ್ಯಲಕ್ಷ್ಮೀ ನಾರಾಯಣ, ಎಚ್. ಆರ್. ವಸ್ತ್ರದ, ದೀಪಶ್ರೀ ಎನ್, ಜ್ಯೋತಿ ಎನ್.ಬೆಟ್ಟಯ್ಯ ಗಾಯನ ಪ್ರಸ್ತುತಪಡಿಸಿದರು.

'ಅಪ್ಪಳಿಸು' ಪತ್ರಿಕೆಯ ವಿಶೇಷ ಸಂಚಿಕೆಯನ್ನು ಮೈಸೂರಿನ ಉದ್ಯಮಿ ಲಕ್ಷ್ಮೀನಾರಾಯಣ ಬಿಡುಗಡೆ ಮಾಡಿದರು. ಸಂಸ್ಥೆಯ ಅಧ್ಯಕ್ಷ ರುದ್ರಪ್ಪ ಭಂಡಾರಿ ಅಧ್ಯಕ್ಷತೆ ವಹಿಸಿದ್ದರು.

(ಜಲಸಂಪನ್ಮೂಲ ಇಲಾಖೆ)
ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ
**ಕಾರ್ಯನಿರ್ವಾಹಕ ಅಭಿಯಂತರ ಕಾರ್ಯಾಲಯ,**
**ಮಲಪ್ರಭಾ ಮತ್ತು ಘಟಪ್ರಭಾ ಯೋಜನೆಗಳು, ಕಾಡಾ, ವಿಭಾಗ ಸಂ–1, ನರಗುಂದ.**
e.mail – eecadadiv1nrg@gmail.com ದೂರವಾಣಿ ಸಂಖ್ಯೆ 08377–295365

ಕ್ರ/ಕಾನಿಅನ/ತಾಂತ್ರಿಕ/ಲೆ.ಶೀ–4705 ಟೆಂಡರ/2023–24/265 ದಿನಾಂಕ : 26–12–2023

**ಇ–ಟೆಂಡರ್ ಮರು ಪ್ರಕಟಣೆ**

ಮಾನ್ಯ ರಾಜ್ಯಪಾಲರು ಕರ್ನಾಟಕ ಸರ್ಕಾರ ಇವರ ಪರವಾಗಿ ಈ ಕೆಳಗೆ ಸಹಿ ಮಾಡಿರುವವರಿಂದ ಕರ್ನಾಟಕ ಸರ್ಕಾರದ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ 2023–24 ನೇ ಸಾಲಿನ ಲೆಕ್ಕಶೀರ್ಷಿಕೆ 4705 ಯೋಜನೆಯಡಿಯ ಕಾಮಗಾರಿಗಳಿಗೆ ಮೇಲ್ಕಾಣಿಸಿದ ಪ್ರಕಟಣೆಯಲ್ಲಿ ಅರ್ಹ ಗುತ್ತಿಗೆದಾರರಿಂದ ಐಟಂ ದರ ಮರು ಟೆಂಡರ್‌ಗಳನ್ನು ಕರೆಯಲಾಗಿರುತ್ತದೆ.

| | |
|---|---|
| ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಇಂಡೆಂಟ್‌ಗಳ ವಿವರ | ಇಂಡೆಂಟ್ ನಂ: 27 (Others) 28(SC) |
| ಟೆಂಡರಿಗಿಟ್ಟ ಮೊತ್ತ (ರೂ. ಲಕ್ಷಗಳಲ್ಲಿ) | 6.77 ರಿಂದ 33.85 |
| ಟೆಂಡರಗಳನ್ನು ಸಲ್ಲಿಸುವ ಕೊನೆಯ ದಿನಾಂಕ | 02–01–2024 (17:00 ಗಂಟೆಯವರೆಗೆ) |
| ಗುತ್ತಿಗೆದಾರರ ಬಿಡ್‌ಗಳನ್ನು ತೆರೆಯುವ ದಿನಾಂಕ | 04–01–2024 (10:30 ಗಂಟೆಯ ನಂತರ) |

ಕಾಮಗಾರಿಗಳ ಹೆಸರು / ಗುತ್ತಿಗೆದಾರರ ಅರ್ಹತೆ/ ಟೆಂಡರಿನ ನಿಯಮ/ ಟೆಂಡರ್ ಪ್ರೊಸೆಸಿಂಗ್ ಶುಲ್ಕ ಇತ್ಯಾದಿ ವಿವರಗಳಿಗೆ (www.kppp.karnataka.gov.in) ಮೂಲಕ ಮಾಹಿತಿ ಪಡೆಯಬಹುದು ಅಥವಾ ಈ ಕಚೇರಿಯ ದೂರವಾಣಿ ಸಂಖ್ಯೆ 08377–295365 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು. ಟೆಂಡರ್‌ಗಳನ್ನು ಸ್ವೀಕರಿಸುವ ಅಧಿಕಾರಿಯು ಯಾವುದೇ ಕಾರಣ ನೀಡದೇ ಯಾವುದೇ ಟೆಂಡರನ್ನು ಅಥವಾ ಎಲ್ಲಾ ಟೆಂಡರ್‌ಗಳನ್ನು ತಿರಸ್ಕರಿಸುವ ಮತ್ತು ರದ್ದುಪಡಿಸುವ ಅಧಿಕಾರವನ್ನು ಹೊಂದಿರುತ್ತಾರೆ.

ಸಹಿ/– ಕಾರ್ಯನಿರ್ವಾಹಕ ಅಭಿಯಂತರರು
ಮಲಪ್ರಭಾ ಮತ್ತು ಘಟಪ್ರಭಾ ಯೋಜನೆಗಳು
ಕಾಡಾ, ವಿಭಾಗ ಸಂ–1, ನರಗುಂದ

ವಾ.ಸಾ.ಇ/ಗದಗ/404/ದೇಶಪಾಂಡೆಪಬ್ಲಿಸಿಟಿ/2023–24

## ಅಯೋಧ್ಯಾ ರಾಮಮಂದಿರಕ್ಕೆ ಮುಸ್ಲಿಂ ದರ್ಜಿಯಿಂದ ಸಿದ್ಧವಾದ ಹನುಮದ್ಧ್ವಜ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಅಯೋಧ್ಯೆಯ ರಾಮ ಮಂದಿರಲ್ಲಿ ರಾಮ ಲಲ್ಲಾ ಪ್ರಾಣ ಪ್ರತಿಷ್ಠಾಪನೆಗೆ ಇನ್ನೂ ಒಂದು ತಿಂಗಳು ಬಾಕಿ ಇರುವಾಗಲೇ ರಾಮ ಮತ್ತು ಹನುಮಾನ್ ಧ್ವಜಗಳಿಗೆ ಭಾರಿ ಬೇಡಿಕೆ ಕಂಡು ಬಂದಿದೆ.

ಇನ್ನು 40 ಅಡಿ ಉದ್ದ ಮತ್ತು 42 ಅಡಿ ಅಗಲದ ಹನುಮಾನ್ ಧ್ವಜವನ್ನು ಮುಸ್ಲಿಂ ಟೈಲರ್ ಗುಲಾಮ್ ಜಿಲಾನಿ(55) ಅವರು ಹೊಲಿದಿದ್ದಾರೆ.

ಈ ಭವ್ಯವಾದ ಧ್ವಜ ಜನವರಿ 22 ರಂದು ಅಯೋಧ್ಯೆಯ ರಾಮಮಂದಿರದ ಮೇಲೆ ಹಾರಿಸಲು ಸಿದ್ಧವಾಗಿದೆ. ಜಿಲಾನಿ ಮೂರನೇ ತಲೆಮಾರಿನ ಟೈಲರ್ ಆಗಿದ್ದು, ಜಾರ್ಖಂಡ್‌ನ ಹಜಾರಿಬಾಗ್ ಜಿಲ್ಲೆಯಲ್ಲಿ ಧಾರ್ಮಿಕ 'ಮಹಾವೀರಿ' ಧ್ವಜಗಳನ್ನು ತಯಾರಿಸುವಲ್ಲಿ ಪರಿಣತಿ ಪಡೆದಿದ್ದಾರೆ.

"100 ಕೋಟಿಗೂ ಹೆಚ್ಚು ಜನರು ಕನಸು ಕಾಣುತ್ತಿರುವ ಐತಿಹಾಸಿಕ ರಾಮ ಮಂದಿರವನ್ನು ನಾನೇ ಹೊಲಿದ ಧ್ವಜ ಅಲಂಕರಿಸುತ್ತಿದೆ ಎಂಬ ಹೆಮ್ಮೆ ನನಗೆ ಇದೆ. ನನಗೆ ಅವಕಾಶ ಸಿಕ್ಕರೆ, ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲು ಖಂಡಿತವಾಗಿಯೂ ಅಯೋಧ್ಯೆಗೆ ಹೋಗುತ್ತೇನೆ" ಎಂದು ಜಿಲಾನಿ ಪಿಟಿಐಗೆ ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಜನವರಿ 22 ರಂದು ರಾಮ ಮಂದಿರದಲ್ಲಿ 'ಪ್ರಾಣ ಪ್ರತಿಷ್ಠಾಪನೆ' ಅಥವಾ ರಾಮಲಲ್ಲಾ ಮೂರ್ತಿಯ ಪ್ರತಿಷ್ಠಾಪನೆ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ತಮ್ಮ ತಂದೆ ದಿ. ಅಬ್ದುಲ್ ಶಕುರ್ ಅವರಿಂದ ತಾನು ಹೊಲಿಗೆ ಕಲಿತಿರುವುದಾಗಿ ಜಿಲಾನಿ ಅವರು ಹೇಳಿದ್ದಾರೆ.

"ನಾನು ನನ್ನ ತಂದೆಯೊಂದಿಗೆ ವೀರ್ ವಸ್ತ್ರಾಲಯದ ಮುಂಭಾಗದಲ್ಲಿರುವ ಫತೇ ಲಾಲ್ ಅಗರ್ವಾಲ್ ಒಡೆತನದ ಭೋಲಾ ವಸ್ತ್ರಾಲಯದಲ್ಲಿ ಕೆಲಸ ಮಾಡುತ್ತಿದ್ದೆ, ಅಲ್ಲಿ ನಾನು ಪ್ರಸ್ತುತ ಉದ್ಯೋಗದಲ್ಲಿದ್ದೇನೆ" ಎಂದು ಅವರು ತಿಳಿಸಿದ್ದಾರೆ.

40 ಅಡಿಯ ಹನಮಾನ್ ಧ್ವಜದಲ್ಲಿ ಒಂದು ಬದಿಯಲ್ಲಿ ಹನುಮಾನ್ ಮತ್ತು ಇನ್ನೊಂದು ಬದಿಯಲ್ಲಿ ಹನುಮಂತನ ಭುಜದ ಮೇಲೆ ರಾಮ ಮತ್ತು ಲಕ್ಷ್ಮಣನ ಚಿತ್ರಗಳನ್ನು ಹೊಂದಿದೆ ಎಂದು ವೀರ್ ವಸ್ತ್ರಾಲಯದ ಮಾಲೀಕ ದೇವೇಂದ್ರ ಜೈನ್ ಹೇಳಿದ್ದಾರೆ.

### ರೈತ ದಿನಾಚರಣೆ ಅಂಗವಾಗಿ 'ಕಿಸಾನ್ ಗೋಷ್ಠಿ ಕಾರ್ಯಕ್ರಮ'ದಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ಕೃಷಿಯನ್ನೇ ಉದ್ಯಮವನ್ನಾಗಿಸಿ ಸಾಧನೆ ಮಾಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಕಲ ಜೀವರಾಶಿಗಳಿಗೆ ಅನ್ನ ನೀಡುವ ಅನ್ನದಾತ ದೇಶದ ಬೆನ್ನೆಲುಬು. ದೇಶದ ಸಂಸ್ಕೃತಿಯ ಪ್ರತೀಕವಾದ ಕೃಷಿಯನ್ನೇ ನಂಬಿರುವ ರೈತರ ಬದುಕು ಹಸನಾಗುವಲ್ಲಿ ಸರ್ಕಾರದ ಕೃಷಿ ಪೂರಕ ಯೋಜನೆ, ಸೌಲಭ್ಯಗಳು ಎಲ್ಲ ರೈತರಿಗೂ ತಲುಪಬೇಕು ಮತ್ತು ಎಲ್ಲರೂ ರೈತರನ್ನು ಗೌರವಿಸಬೇಕು ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ತಾಲೂಕಿನ ಯಳವತ್ತಿ ಗ್ರಾಮದ ಕೋಟೆ ಆವರಣದಲ್ಲಿನ ಸಾಂಸ್ಕೃತಿಕ ಭವನದಲ್ಲಿ ಕೃಷಿ ಇಲಾಖೆ ವತಿಯಿಂದ ರೈತ ದಿನಾಚರಣೆ ಅಂಗವಾಗಿ ಬುಧವಾರ ಹಮ್ಮಿಕೊಳ್ಳಲಾಗಿದ್ದ 'ಕಿಸಾನ್ ಗೋಷ್ಠಿ ಕಾರ್ಯಕ್ರಮ'ದಲ್ಲಿ ಮಾತನಾಡಿದರು.

ರೈತರು ಅತಿವೃಷ್ಟಿ, ಅನಾವೃಷ್ಟಿ, ರೋಗಬಾಧೆ, ಬೆಲೆ ಕುಸಿತ ಇತ್ಯಾದಿ ಅನೇಕ ಕಾರಣದಿಂದ ಸಂಕಷ್ಟ ಅನುಭವಿಸುತ್ತಿದ್ದರೂ ಕೃಷಿ ಕಾಯಕದಿಂದ ವಿಮುಖರಾಗಿಲ್ಲ. ಕಾರಣ, ಭೂಮಿ ತಾಯಿಯು ನಂಬಿದ ರೈತರ ಕೈ ಬಿಡುವುದಿಲ್ಲ ಎಂಬ ಅಗಾಧವಾದ ನಂಬಿಕೆ. ಭವಿಷ್ಯದಲ್ಲಿ ಕೃಷಿ ಕ್ಷೇತ್ರಕ್ಕೆ ಸಾಕಷ್ಟು ಪ್ರಾತಿನಿಧ್ಯ, ಮಹತ್ವ ಖಂಡಿತವಾಗಿಯೂ ಬರುತ್ತದೆ ಎಂದರು.

ಗದಗ ಕೃಷಿ ವಿಸ್ತರಣಾ ಕೇಂದ್ರದ ವಿಜ್ಞಾನಿ ಎಸ್.ಕೆ. ಮುದ್ಲಾಪುರ, ಕೃಷಿ ವಿಜ್ಞಾನಿ ವಿ.ಡಿ. ವೈಕುಂಠೆ, ಹಿರಿಯ ತೋಟಗಾರಿಕೆ ಸಹಾಯಕ ನಿರ್ದೇಶಕ ಸುರೇಶ ಕುಂಬಾರ ಉಪನ್ಯಾಸ ನೀಡಿ, ರೈತರು ಕೃಷಿಯ ಜತೆಗೆ ಕೃಷಿಗೆ ಪೂರಕವಾದ ಹೈನುಗಾರಿಕೆ, ಕೋಳಿ, ಕುರಿ ಸಾಕಾಣಿಕೆಯಂತಹ ಉಪ ಕಸುಬುಗಳನ್ನು ಮಾಡುವ ಮೂಲಕ ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು. ಅಲ್ಲದೇ ಸಾವಯವ ಕೃಷಿಯತ್ತ ಚಿತ್ತಹರಿಸಿ ಭೂಮಿಯ ಫಲವತ್ತತೆ ಹೆಚ್ಚಿಸಬೇಕು ಎಂದರು.



> ಕೃಷಿ ಕುಟುಂಬದ ವಿದ್ಯಾವಂತ ಯುವಕರು ಉದ್ಯೋಗ ಅರಸಿ ನಗರ ಪ್ರದೇಶಗಳಿಗೆ ಹೋಗುವುದನ್ನು ಬಿಟ್ಟು ಕೃಷಿಯನ್ನೇ ಉದ್ಯಮವನ್ನಾಗಿಸಿಕೊಂಡು ಸಾಧನೆ ಮಾಡಲು ಮುಂದೆ ಬರಬೇಕು. ರೈತರು ಸಾವಯವ ಪದ್ಧತಿಯೊಂದಿಗೆ ವೈಜ್ಞಾನಿಕತೆಯನ್ನು ಅಳವಡಿಸಿಕೊಂಡು ಕೃಷಿಯನ್ನು ಲಾಭದಾಯಕವಾಗಿಸಿ ಬದುಕು ಕಟ್ಟಿಕೊಳ್ಳಬೇಕು.
>
> – ಡಾ.ಚಂದ್ರು ಲಮಾಣಿ.
> ಶಾಸಕರು, ಶಿರಹಟ್ಟಿ.

ರೈತ ಸಂಘಟನೆಗಳ ಪ್ರಮುಖರಾದ ಬಸಣ್ಣ ಹಂಜಿ, ಟಾಕಪ್ಪ ಸಾತಪುತೆ, ಲೋಕೇಶ ಜಾಲವಾಡಗಿ, ಪ್ರಕಾಶ ಕಲ್ಯಾಣಿ ಮಾತನಾಡಿ, ರೈತ ದೇಶದ ಬೆನ್ನೆಲುಬು ಎಂಬುದು ಘೋಷಣೆಗೆ ಮಾತ್ರ ಸೀಮಿತವಾಗದೆ, ಬರಗಾಲದ ಸಂಕಷ್ಟದಲ್ಲಿ ಸಿಲುಕಿರುವ ರೈತರಿಗೆ ಬೆಳೆಹಾನಿ, ಬೆಳೆವಿಮೆ ಪರಿಹಾರ ಕಲ್ಪಿಸಲು ಕೂಡಲೇ ಕ್ರಮ ವಹಿಸಬೇಕು. ಎಷ್ಟೋ ರೈತರು ಕೃಷಿ ಬಿಟ್ಟು ಬೇರೆ ಕೆಲಸದತ್ತ ಮುಖ ಮಾಡುತ್ತಿದ್ದಾರೆ. ಸರ್ಕಾರ ರೈತರ ಅಭಿವೃದ್ಧಿಗಾಗಿ ವಿವಿಧ ಕಾರ್ಯಕ್ರಮವನ್ನು ಹಮ್ಮಿಕೊಂಡು ಅದನ್ನು ಕಾರ್ಯರೂಪಕ್ಕೆ ತರುವ ಕೆಲಸವನ್ನು ಮಾಡಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಕೃಷಿಯಲ್ಲಿ ಡಾಕ್ಟ-ರೇಟ್ ಪುರಸ್ಕೃತರಾದ ಸಾವಯುವ ಕೃಷಿಕ ಡಾ.ಬಸವರಾಜ ನಾವಿ ಸೇರಿ ಸಾಧಕ ರೈತರನ್ನು ಸನ್ಮಾನಿಸಲಾಯಿತು. ಗ್ರಾ.ಪಂ ಉಪಾಧ್ಯಕ್ಷ ಬಸವಣ್ಣೆಪ್ಪ ಚಿಣಗಿ ಅಧ್ಯಕ್ಷತೆ ವಹಿಸಿದ್ದರು. ರೈತರಾದ ನಿಂಗಪ್ಪ ಬನ್ನಿ, ನಿಂಗಪ್ಪ ಗುಡ್ಡಣ್ಣವರ, ವಿಶ್ವನಾಥ ಚಿಂಚಲಿ, ಶಿವಯ್ಯ ಮಠಪತಿ, ಆರ್.ಬಿ. ಅಜ್ಜನಗೌಡ್ರ, ನಿಂಗಪ್ಪ ಗುಡ್ಡಣ್ಣವರ, ಕೃಷಿ ಅಧಿಕಾರಿ ಪಿ.ಕೆ. ಹೊನ್ನಪ್ಪನವರ, ಎಸ್.ಬಿ. ಲಮಾಣಿ, ವೈ.ಬಿ. ಮಾದರಿ ಸೇರಿ ರೈತ ಬಾಂಧವರು, ರೈತ ಮಹಿಳೆಯರು ಪಾಲ್ಗೊಂಡಿದ್ದರು. ಸಹಾಯಕ ಕೃಷಿ ನಿರ್ದೇಶಕ ರೇವಣಪ್ಪ ಮನಗೂಳಿ ಸ್ವಾಗತಿಸಿದರು.

ರೈತ ಬಾಪುಗೌಡ ಭರಮಗೌಡ್ರ ನಿರೂಪಿಸಿದರು. ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ ವಂದಿಸಿದರು. ಮಲ್ಲು ಕಳಸಾಪುರ ರೈತಗೀತೆ ಹಾಡಿದರು. ಗ್ರಾಮದ ಜೆಎಫ್‌ಸಿ ಹೈಸ್ಕೂಲ್ ವಿದ್ಯಾರ್ಥಿನಿಯರು ಪ್ರಾರ್ಥಿಸಿದರು.

> ಕೃಷಿ ಉಪ ನಿರ್ದೇಶಕಿ ಸ್ಫೂರ್ತಿ ಜಿ.ಎಸ್. ಮಾತನಾಡಿ, ರೈತರು ಕೃಷಿ ನಷ್ಟದಿಂದ ಹೊರಬರಬೇಕು ಎಂದು ಸರ್ಕಾರ ಕೃಷಿ ಇಲಾಖೆ ಮೂಲಕ ಹತ್ತಾರು ಯೋಜನೆಗಳನ್ನು ಜಾರಿಗೊಳಿಸುತ್ತಿದೆ. ನೀರಾವರಿ ಹೊಂದಿರುವ ರೈತರಿಗೆ ಸಹಾಯಧನದಡಿ ಹನಿ ನೀರಾವರಿಗಾಗಿ ಸ್ಪಿಂಕ್ಲರ್ ಸೆಟ್, ಕೃಷಿ ಹೊಂಡ, ಕೃಷಿ ಯಂತ್ರೋಪಕರಣ ನೀಡಲಾಗುತ್ತಿದೆ. ಎಸ್‌ಸಿ/ಎಸ್ಟಿ ರೈತರಿಗೆ ಪ್ರಾಶಸ್ತ್ಯ ನೀಡಲಾಗುತ್ತಿದ್ದು, ಅವರು ಇದರ ಸದ್ವಿನಿಯೋಗ ಪಡೆದುಕೊಳ್ಳಬೇಕು. ಕೃಷಿ ಇಲಾಖೆಯಿಂದ ಸೌಲಭ್ಯ ಪಡೆಯಲು ರೈತರು ಕಡ್ಡಾಯವಾಗಿ ಫ್ರೂಟ್ ಐಡಿ ಮಾಡಿಸಿಕೊಳ್ಳಬೇಕು ಎಂದರು.

### ವಿಕಲಚೇತನರಿಗೆ ಕೃತಕ ಕಾಲು, ಸ್ಯಾಂಡಲ್ಸ್ ವಿತರಣೆ ಕಾರ್ಯಕ್ರಮ

# ರೆಡ್ ಕ್ರಾಸ್ ಚಟುವಟಿಕೆಗಳಿಗೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ರೆಡ್ ಕ್ರಾಸ್ ಭವನದಲ್ಲಿ ದಿ. ಪಂಕುಬಾಯಿ ಹಾಗೂ ದಿ. ಕುಂದನ್‌ಮಲ್ ಇವರ ಸ್ಮರಣಾರ್ಥ ಅವರ ಪುತ್ರರಾದ ಅಶೋಕ ಜೈನ್ ಕೊಡಮಾಡಿದ ದೇಣಿಗೆ ಹಣದಿಂದ ವಿಕಲಚೇತನರಿಗೆ ಕೃತಕ ಕಾಲು ಹಾಗೂ ಸ್ಯಾಂಡಲ್ಸ್ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ರೆಡ್ ಕ್ರಾಸ್ ಸಂಸ್ಥೆಯ ಗೌರವ ಕಾರ್ಯದರ್ಶಿ ಡಾ. ಎಮ್.ಡಿ. ಸಮುದ್ರಿ ಮಾತನಾಡುತ್ತ, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರವು ಡಾ. ಆರ್.ಎನ್. ಗೋಡಬೋಲೆಯವರ ಕನಸಿನ ಕೂಸಾಗಿದ್ದು, ಅದರಿಂದ ವಿಕಲಚೇತನರಿಗೆ ಸಾಧನ-ಸಲಕರಣೆಗಳನ್ನು ವಿತರಿಸುತ್ತಿದೆ. ಈ ಹಿಂದೆ ಜೈನ್ ಸೋಷಿಯಲ್ ಗ್ರೂಪ್‌ನವರು ತಮ್ಮ ವಯಕ್ತಿಕ ಆದಾಯದಲ್ಲಿ ಉಳಿತಾಯ ಮಾಡಿ ಕೊಟ್ಟಿರುವ ದಾನದ ಹಣದ ಮೂಲಕ ಈವರೆಗೆ ವಿಕಲಚೇತನರಿಗೆ ಸಾಧನ ಸಲಕರಣೆ ವಿತರಿಸಿದೆ.

ಸಂದಿಗ್ಧ ಸಂದರ್ಭದಲ್ಲಿ ಅಶೋಕ್ ಜೈನ್ ಅವರು ರೆಡ್ ಕ್ರಾಸ್ ಸಂಸ್ಥೆಗೆ ದಾನವನ್ನು ಕೊಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ. ರೆಡ್ ಕ್ರಾಸ್ ಸಂಸ್ಥೆ ಸಮಾಜದ ಇನ್ನಿತರ ಸಂಘ-ಸಂಸ್ಥೆಗಳ ಜೊತೆಗೂಡಿ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿದೆ. ಈ ಎಲ್ಲಾ ಚಟುವಟಿಕೆಗಳಿಗೆ ಎಲ್ಲರೂ ಕೈಗೂಡಿಸಬೇಕೆಂದು ಹೇಳಿದರು.




> ಮೂವರು ಫಲಾನುಭವಿಗಳಿಗೆ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ವರ್ಕ್‌ಶಾಪ್‌ನಲ್ಲಿ ಪಿ & ಓ ತಂತ್ರಜ್ಞ ತಸ್ಲಂಅಲಿ ಜಿ.ಮುಲ್ಲಾ ತಯಾರಿಸಿದ ಕೃತಕ ಕಾಲನ್ನು, 2 ಜನ ಫಲಾನುಭವಿಗಳಿಗೆ ಶೂ ಮೇಕರ್ ಶಿವಯೋಗಿ ಬೆಳವಡಿ ತಯಾರಿಸಿದ ವಕ್ರಪಾದ ಸ್ಯಾಂಡಲ್ಸ್, ಓರ್ವ ವಿಕಲಚೇತನ ಫಲಾನುಭವಿಗಳಿಗೆ ಹ್ಯಾಂಡ್ ಸ್ಯಾಂಡಲ್ಸ್‌ಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿ ಡಾ. ಆರ್.ಎನ್. ಗೋಡಬೋಲೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ರೆಡ್ ಕ್ರಾಸ್ ಸಂಸ್ಥೆಯ ಉಪಾಧ್ಯಕ್ಷ ಅಶೋಕ ಜೈನ್, ಅತಿಥಿಗಳಾಗಿ ನಿವೃತ್ತ ಸಹಾಯಕ ಕೃಷಿ ಅಧಿಕಾರಿ ಎಮ್.ಪಿ. ಮೂಲಿಮನಿ, ನಿವೃತ್ತ ಉಪ ಆರೋಗ್ಯಾಧಿಕಾರಿ ಡಾ. ವ್ಹಿ.ಹೆಚ್. ಹೊಂಬಣ್ಣವರ, ಜೆ.ಟಿ. ಕಾಲೇಜಿನ ನಿವೃತ್ತ ಪ್ರಾಚಾರ್ಯ ಪ್ರೊ. ಸಿ.ಲಿಂಗಾರಡ್ಡಿ, ಸಂಸ್ಥೆಯ ಸದಸ್ಯರಾದ ಎಮ್.ಎಮ್. ಕಾಗದಗಾರ, ದಿನೇಶ್ ಜೈನ್ ಹಾಜರಿದ್ದರು.

ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ವಾಗ್ದೇವಿ ಕುಲಕರ್ಣಿ ಸ್ವಾಗತಿಸಿದರು. ನೋಡಲ್ ಅಧಿಕಾರಿ ಪ್ರಕಾಶ ಗಾಣಿಗೇರ ನಿರೂಪಿಸಿದರು. ರುದ್ರಪ್ಪ ಕರಂಡಿ ವಂದಿಸಿದರು.

## ಅರ್ಹರು ಕಡ್ಡಾಯವಾಗಿ ಮತದಾನ ಮಾಡಿ



■ವಿಜಯಸಾಕ್ಷಿ ಸುದ್ದಿ, ರೋಣ

ಜಗತ್ತಿನ ಅತಿ ದೊಡ್ಡ ಪ್ರಜಾಪ್ರಭುತ್ವ ಹೊಂದಿದ ರಾಷ್ಟ್ರ ಭಾರತವಾಗಿದ್ದು, ಯಾವುದೇ ಕಾರಣಕ್ಕೂ ಇಂತಹ ರಾಷ್ಟ್ರದಲ್ಲಿ ವಯಸ್ಕ ಮತದಾರರು ಮತದಾನದಿಂದ ವಿಮುಖರಾಗದೇ, ಮತದಾನ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸುವ ಮೂಲಕ ರಾಷ್ಟ್ರಕ್ಕೆ ನಿಮ್ಮದೇ ಆದ ಕೊಡುಗೆಯನ್ನು ನೀಡಿ ಎಂದು ರೋಣ ತಾ.ಪಂ ಸಹಾಯಕ ನಿರ್ದೇಶಕ ರಿಯಾಜ ಖತೀಬ್ ಸಲಹೆ ನೀಡಿದರು.

ರೋಣ ತಾಲೂಕಿನ ಹಿರೇಹಾಳ ಗ್ರಾ.ಪಂ ವ್ಯಾಪ್ತಿಯ ಬೆಳಗೋಡ ಗ್ರಾಮದ ಮತಗಟ್ಟೆ ಸಂಖ್ಯೆ 9ರಲ್ಲಿ ಇವಿಎಂ ಹಾಗೂ ವಿವಿ ಪ್ಯಾಟ್ ಪ್ರಾತ್ಯಕ್ಷಿಕೆ ನೀಡಿ ಅವರು ಮಾತನಾಡಿದರು.

ಮುಂಬರುವ ಲೋಕಸಭೆ, ಜಿ.ಪಂ ಹಾಗೂ ತಾ.ಪಂ ಚುನಾವಣೆಯಲ್ಲಿ ಕಡ್ಡಾಯವಾಗಿ ಮತದಾನ ಮಾಡಲು ವಿನಂತಿಸಿದ ಅವರು, ಮತದಾನ ಕೇಂದ್ರಗಳಲ್ಲಿ ಬಳಸಲಾಗುವ ಮತಯಂತ್ರಗಳು ಪಾರದರ್ಶಕವಾಗಿದ್ದು, ಮತದಾರಿಗೆ ತಮ್ಮ ಮತದಾನದ ನಿಖರತೆಯನ್ನು ಖಾತ್ರಿಪಡಿಸುತ್ತದೆ. ಮತದಾರರು ಕಡ್ಡಾಯವಾಗಿ ಮತದಾನ ಗುರುತಿನ ಚೀಟಿಯನ್ನು ಮತಗಟ್ಟೆಗೆ ತೆಗೆದುಕೊಂಡು ಹೋಗಿ ಮತ ಚಲಾಯಿಸುವುದು ಹಾಗೂ ಯಾವ ಯಾವ ದಾಖಲೆಗಳು ಮಾನ್ಯವಾಗಿರುತ್ತವೆ ಎಂಬುದರ ಬಗ್ಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಬೆಳಗೋಡ ಮತಗಟ್ಟೆ -9ರ ಸೆಕ್ಟರ್ ಅಧಿಕಾರಿ ರಿಯಾಜ ಕೆ.ಕೆ, ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಬಸಪ್ಪ ದಳವಾಯಿ, ಹಿರೇಹಾಳ ಗ್ರಾ.ಪಂ ಸಿಬ್ಬಂದಿಗಳು ಹಾಗೂ ಬೆಳಗೋಡ ಗ್ರಾಮದ ಮತದಾರರು, ಹಿರಿಯರು ಉಪಸ್ಥಿತರಿದ್ದರು.

# ಮಕ್ಕಳು ಹೆಚ್ಚು ಜಾಗ್ರತೆಯಿಂದ ಇರಬೇಕು



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳಿಗೆ ಶಿಕ್ಷಣದೊಂದಿಗೆ ಮಾನವೀಯ ಮೌಲ್ಯಗಳನ್ನು ಕಲಿಸುವುದರಿಂದ ಅಪರಾಧಗಳನ್ನು ತಡೆಗಟ್ಟಲು ಸಾಧ್ಯವಿದೆ ಎಂದು ಎಎಸ್‌ಐ ಎಚ್.ಬಿ. ಪಾಟೀಲ್ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆ(ಆರ್‌ಎಂಎಸ್‌ಎ)ಯಲ್ಲಿ ಕರ್ನಾಟಕ ರಾಜ್ಯ ಪೊಲೀಸ್, ಗದಗ ಜಿಲ್ಲಾ ಪೊಲೀಸ್, ಮುಳಗುಂದ ಪೊಲೀಸ್ ಠಾಣೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 'ಅಪರಾಧ ತಡೆ ಮಾಸಾಚರಣೆ' ಕಾರ್ಯಕ್ರಮದಲ್ಲಿ ಮಾತನಾಡಿದರು.

ಶಿಕ್ಷಣದ ಉದ್ದೇಶ ಉತ್ತಮ ಜೀವನ ಕಟ್ಟಿಕೊಡುವುದಾಗಿರಬೇಕು. ವ್ಯಕ್ತಿ ಕೇವಲ ಜೀವನೋಪಾಯಕ್ಕಾಗಿ ವಿದ್ಯೆ ಕಲಿಯದೇ, ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳುವಂತೆ ಶಿಕ್ಷಣ ನೀಡಬೇಕು. ಅಂತಹ ಮಾನವೀಯ ಮೌಲ್ಯಗಳಿಂದ ಮಾತ್ರ ಉತ್ತಮ ನಾಗರಿಕನಾಗಲು ಸಾಧ್ಯವಾಗುತ್ತದೆ. ಆಗ ಯಾವುದೇ ಅಪರಾಧಗಳು ಸಂಭವಿಸುವುದಿಲ್ಲ. ಮಕ್ಕಳು ಬಾಲ್ಯ ವಿವಾಹ, ಪೋಕ್ಸೋ ಪ್ರಕರಣ, ಅಪಘಾತಗಳು ಸಂಭವಿಸಿದಲ್ಲಿ ಕೂಡಲೇ 112ಕ್ಕೆ ಕರೆ ಮಾಡಿ ತಿಳಿಸಿದಲ್ಲಿ ತಕ್ಷಣವೇ ಪೊಲೀಸ್ ಇಲಾಖೆ ನಿಮ್ಮ ಸಹಾಯಕ್ಕೆ ಧಾವಿಸುತ್ತದೆ. ಮಕ್ಕಳು ಹೆಚ್ಚು ಜಾಗ್ರತೆಯಿಂದ ಇರಬೇಕು ಎಂದರು.

ಅಧ್ಯಕ್ಷತೆಯನ್ನು ಮಾಹಾದೇವಪ್ಪಾ ಮಾನೇಗಾರ ವಹಿಸಿದ್ದರು. ಮಾಹಾಂತೇಶ ಕೆಂಚನಾಯ್ಕರ್, ಪ.ಪಂ ಸ್ಥಾಯಿ ಸಮಿತಿ ಅಧ್ಯಕ್ಷ ಮಾಹಾಂತೇಶ ನೀಲಗುಂದ, ದಾವಲಸಾಬ ಯಳವತ್ತಿ, ಪ್ರಧಾನ ಗುರು ರವಿ ಡಂಬಳ, ಪೊಲೀಸ್ ಸಿಬ್ಬಂದಿ ಜಿ.ಬಿ. ಕುರಹಟ್ಟಿ, ಶಾಲಾ ಶಿಕ್ಷಕ ವೃಂದ ಮತ್ತು ಮಕ್ಕಳು ಇದ್ದರು.

### ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿಗಳಿಂದ ಗುರುವಂದನಾ, ಸ್ನೇಹ ಸಮ್ಮಿಲನ

# ಗುರು ಎಂದರೆ ವ್ಯಕ್ತಿಯಲ್ಲ, ಶಕ್ತಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ನಿಡಗುಂದಿಯ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯಲ್ಲಿ ಸನ್ 1999-2000ನೇ ಸಾಲಿನ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳ ಸ್ನೇಹ ಸಮ್ಮಿಲನ ಮತ್ತು ಗುರುವಂದನಾ ಕಾರ್ಯಕ್ರಮವು ಯಶಸ್ವಿಯಾಗಿ ನಡೆಯಿತು. ತಮಗೆ ಜ್ಞಾನಾರ್ಜನೆ ನೀಡಿದ ಗುರುಗಳನ್ನು ಒಂದು ಕಡೆ ಸೇರಿಸಿ ಗೌರವ ಸಲ್ಲಿಸುವ ಅದ್ಭುತ ಕ್ಷಣಕ್ಕೆ ಅನ್ನದಾನೇಶ್ವರ ಪ್ರೌಢಶಾಲಾ ಆವರಣ ಸಾಕ್ಷಿಯಾಯಿತು.

ನಿವೃತ್ತ ಶಿಕ್ಷಕ ಪಿ.ಕೆ. ಕರಡಿ ಮಾತನಾಡಿ, ಗುರು ಮತ್ತು ಶಿಷ್ಯರ ನಡುವೆ ಅವಿನಾಭಾವ ಸಂಬಂಧವಿದೆ. ಹೀಗಾಗಿ ಪುರಾಣ ಕಾಲದಿಂದಲೂ ಅದನ್ನು ವಿವಿಧ ರೀತಿಯಲ್ಲಿ ವಿಶ್ಲೇಷಿಸಲಾಗುತ್ತಿದೆ. ಎಂದರು.

ನರೇಗಲ್ಲ ಎಸ್.ಎ. ಕಾಲೇಜು ಉಪನ್ಯಾಸಕ ಎನ್.ಎಸ್. ಹೊನ್ನೂರು ತಮ್ಮ ಉಪನ್ಯಾಸದಲ್ಲಿ, ಮೂಕನನ್ನು ವಾಚಾಳಿಯನ್ನಾಗಿಯೂ, ಹೆಳವನನ್ನು ಬೆಟ್ಟಕ್ಕೆ ಹಾರಬಲ್ಲ ಗಟ್ಟಿಗನನ್ನಾಗಿಯೂ ಮಾಡಬಲ್ಲ ಈ ಕೃಪಾಕರ ಮಾಧವನ ಸ್ವರೂಪದಲ್ಲಿ ಗುರುವಿದ್ದಾನೆ. ಅಂತಹ ಗುರುಗಳಿಗೆ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದು ಅರ್ಥಪೂರ್ಣವಾಗಿದೆ ಎಂದು ತಿಳಿಸಿ, ಜನವರಿ 13ರಂದು ಹಾಲಕೆರೆಯಲ್ಲಿ ನಡೆಯಲಿರುವ ಅಕ್ಷರ ಜಾತ್ರೆಯಲ್ಲಿ ಭಾಗವಹಿಸಲು ಕೋರಿದರು.

ಸಮಾರಂಭದ ಅಧ್ಯಕ್ಷತೆಯನ್ನು ಶಾಲಾ ಸಂಸ್ಥೆಯ ಅಧ್ಯಕ್ಷ ಜಗದೀಶ ಕರಡಿ ವಹಿಸಿದ್ದರು. ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಜಿ. ಗೌಡಪ್ಪಗೌಡ್ರ ಜ್ಯೋತಿಯನ್ನು ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.



> ದಿವ್ಯ ಸಾನ್ನಿಧ್ಯ ವಹಿಸಿದ್ದ ಶಾಖಾ ಶಿವಯೋಗ ಮಂದಿರ ನಿಡಗುಂದಿ ಕೊಪ್ಪದ ಶ್ರೀ ಅಭಿನವ ಚನ್ನಬಸವ ಸ್ವಾಮೀಜಿ ಆಶೀರ್ವಚನ ನೀಡಿ, ಗುರು ಎಂದರೆ ವ್ಯಕ್ತಿಯಲ್ಲ ಅದೊಂದು ಶಕ್ತಿ. ಅಜ್ಞಾನದ ಕತ್ತಲೆಯ ಕಳೆದು ಸುಜ್ಞಾನ ಕಡೆಗೆ ಕರೆದುಕೊಂಡು ಹೋಗುವ ಶಬ್ದವೇ ಗುರು ಎಂದರು. ಇಟಗಿಯ ಭೀಮಾಂಬಿಕಾ ಧರ್ಮರ ಮಠದ ಷಣ್ಮುಖಪ್ಪಜ್ಜವರು ಸಾನ್ನಿಧ್ಯ ವಹಿಸಿ ಮಾತನಾಡಿ, ಇಂತಹ ಆದರ್ಶ ಮತ್ತು ಅನುಕರಣೆಯ ಕಾರ್ಯಕ್ರಮಗಳು ಮುಂದಿನ ಪೀಳಿಗೆಗೆ ದಾರಿದೀಪವಾಗಲಿ ಎಂದು ಶುಭ ಹಾರೈಸಿದರು.

ಹಳೆಯ ವಿದ್ಯಾರ್ಥಿ ರಮೇಶ್ ಮಾಸ್ತಿ ಸ್ವಾಗತಿಸಿದರು. ಕೆಪಿಟಿಸಿಎಲ್ ನಿವೃತ್ತ ಸುಪರಿಡೆಂಡೆಂಟ್ ಕೆ.ವಿ. ಲಗುಬಗಿ, ಆಯ್.ಆರ್. ಮಲ್ಲಾಪೂರ, ವಿ.ಆರ್. ಪಾಟೀಲ, ವಿ.ವಿ. ಲಗುಬಗಿ, ಎಂ.ಬಿ. ಕೊಪ್ಪದ, ಎಂ.ವಿ. ಬಿಂಗಿ, ಎಂ.ಎಸ್. ಅತ್ತಾರ, ಕೆ.ಬಿ. ಗಡಾದ, ಕೆ.ಪಿ. ರಾಠೋಡ, ಎಸ್.ಐ. ದಿಂಡೂರ, ವೆಂಕನಗೌಡ್ರ, ಎಸ್.ವಿ. ಹಳ್ಳಿಕೇರಿ, ಎಚ್.ಬಿ. ಕಟ್ಟಿಮನಿ, ಬಿ.ಪಿ. ಕಾಗಿ, ಎಸ್.ಬಿ. ಹಿರೇಮಠ, ಕೆ.ವಿ. ಲಗುಬಗಿ, ಸಿದ್ದನಗೌಡ ಇನಾಮತಿ, ದ್ಯಾಮಣ್ಣ ಕಂಬಳಿ ಇವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಹಳೆ ವಿದ್ಯಾರ್ಥಿಗಳಾದ ವೈದ್ಯಾಧಿಕಾರಿ ಮಂಜುನಾಥ ಗೋಣಿ, ಗಂಗಮ್ಮ ಅರಮನಿ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ರಮೇಶ್ ರಾಮದುರ್ಗ, ಮಂಜುನಾಥ ಅಮರಗೋಳ, ಪ್ರಕಾಶ ಬಡಿಗೇರ, ನೀಲಪ್ಪ ಮೇಟಿ, ಸಂಗಪ್ಪ ಗೆದಗೇರಿ, ಶೇಖರ ಮಾಸ್ತಿ, ಮಹಿಳಾ ವಿದ್ಯಾರ್ಥಿಗಳಾದ ಗಂಗವ್ವ ಅರಮನಿ, ಕಳಕವ್ವ ಕುರಹಟ್ಟಿ, ಶೋಭಾ ಗೌಡ್ರ, ಕವಿತಾ ಕೋರಿ, ಶ್ರೀದೇವಿ ಚಂಪನಗೌಡ್ರ, ಜಯಶ್ರೀ ರಾಮಣ್ಣವರ, ಶ್ರೀದೇವಿ ಗದಗೇರಿ, ಸುಜಾತಾ ಬಡಿಗೇರ, ರೇಷ್ಮಾ ಅಬ್ಬಿಗೇರಿ, ನೂರಜಾನ ನದಾಫ್ ಸೇರಿದಂತೆ ಗ್ರಾಮದ ನಾಗರಿಕರು ಉಪಸ್ಥಿತರಿದ್ದರು.

ಕಳಕಮ್ಮ ಮತ್ತು ಸಂಗಡಿಗರು ಪ್ರಾರ್ಥಿಸಿದರು. ರಮೇಶ ಮಾಸ್ತಿ ಸ್ವಾಗತಿಸಿದರು. ವಿ.ಬಿ. ಹಾವರಿಗಿ ಕಾರ್ಯಕ್ರಮ ನಿರೂಪಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka